ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 291 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 11–06–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 01 Issue - 291 | Title- Code: KARKAN 28269 | Chitradurga | Date: 11-06-2024 Tuesday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಶಾಸಕ ಟಿ.ರಘುಮೂರ್ತಿಯವರ 61ನೇ ಹುಟ್ಟುಹಬ್ಬ ಆಚರಣೆ 2
ಹೊಸದುರ್ಗ ಕನಕ ಭವನ ನಿರ್ಮಾಣಕ್ಕೆ 3 ಕೋಟಿ ರೂ ಅನುದಾನ–ಗೋವಿಂದಪ್ಪ 3
ಸಹಕಾರ ಸಂಘಗಳು ರೈತರಿಗೆ ಪೂರಕವಾಗಿ ಕೆಲಸ ಮಾಡಬೇಕು: ಷಣ್ಮುಖಪ್ಪ 4

ಸುದ್ದಿ, ಜಾಹಿರಾತಿಗೆ
9686622252

**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಕೇಂದ್ರದಲ್ಲಿ ಅಹಿಂದ ವರ್ಗಕ್ಕೆ ಅನ್ಯಾಯ

## ವೀರಶೈವ ಲಿಂಗಾಯತ ವರ್ಗಕ್ಕೆ ಅಪಮಾನ –ಮತಗಳಿಗಷ್ಟೇ ಲಿಂಗಾಯತರು, ಅಧಿಕಾರಕ್ಕೆ ಅಲ್ಲ, ಬಿಜೆಪಿ ಮುಖವಾಡ ಬಯಲು –ಮಾಜಿ ಸಚಿವ ಎಚ್.ಆಂಜನೇಯ ಆರೋಪ

» ಚಿತ್ರದುರ್ಗ

ಲಿಂಗಾಯತರು ಹಾಗೂ ಅಹಿಂದ ಸಮುದಾಯದ ಜನರು ಮತ ಹಾಕಲು ಅಷ್ಟೇ ಸೀಮಿತ, ಅಧಿಕಾರಕ್ಕೆ ಅಲ್ಲ ಎಂಬ ಬಿಜೆಪಿಯ ಮನಸ್ಥಿತಿ ಕೇಂದ್ರ ಸಚಿವ ಸಂಪುಟ ರಚನೆ ವೇಳೆ ಬಹಿರಂಗಗೊಂಡಿದೆ ಎಂದು ಮಾಜಿ ಸಚಿವ, ಕೆಪಿಸಿಸಿ ಉಪಾಧ್ಯಕ್ಷ ಎಚ್.ಆಂಜನೇಯ ದೂರಿದ್ದಾರೆ.

ಸೋಮವಾರ ಪತ್ರಿಕಾ ಹೇಳಿಕೆ ನೀಡಿರುವ ಅವರು, ರಾಜ್ಯದಲ್ಲಿ ಬಿಜೆಪಿ ಉಸಿರಾಡುತ್ತಿರುವುದೇ ವೀರಶೈವ ಲಿಂಗಾಯತ ಸಮುದಾಯದ ಮತಗಳ ಮೇಲೆ. ಆದರೆ ಈ ಸಮುದಾಯದ ಸಂಸದರಿಗೆ ಕ್ಯಾಬಿನೆಟ್ ದರ್ಜೆಯ ಖಾತೆ ನೀಡದೇ, ಕವಡೆ ಕಾಸು ಕಿಮ್ಮತ್ತು ಇಲ್ಲದ ರಾಜ್ಯ ದರ್ಜೆ ಮಂತ್ರಿ ಸ್ಥಾನ ನೀಡುವ ಮೂಲಕ ಇಡೀ ಲಿಂಗಾಯತ ವರ್ಗವನ್ನೇ ಅವಮಾನಕಾರವಾಗಿ ನಡೆಸಿಕೊಂಡಿದೆ. ಈ ಹಿಂದೆಯೂ ಬಿ.ಎಸ್.ಯಡಿಯೂರಪ್ಪ ನೆರಳಲ್ಲಿ ಅಧಿಕಾರಕ್ಕೆ ಬಂದ ಬಳಿಕ ಅವರನ್ನು ಅತ್ಯಂತ ಕೆಟ್ಟದಾಗಿ ನಡೆಸಿಕೊಂಡಿದ್ದ ಬಿಜೆಪಿ ಈಗ ಅದಕ್ಕಿಂತೂ ಹೆಚ್ಚು ಅಪಮಾನ ಮಾಡುವ ರೀತಿ ಕೇಂದ್ರ ಸಚಿವ ಸಂಪುಟ ರಚನೆ ವೇಳೆ ನಡೆದುಕೊಂಡಿದೆ ಎಂದು ಬೇಸರಿಸಿದ್ದಾರೆ.

ಜೊತೆಗೆ ಎಸ್ಸಿ, ಎಸ್ಟಿ, ಹಿಂದುಳಿದ ವರ್ಗಕ್ಕೆ ಚುನಾವಣೆ ಸಂದರ್ಭದಲ್ಲಿ ಅಧಿಕಾರದ ಆಸೆ ತೋರಿಸಿ ಮತ ಪಡೆದು ಅಧಿಕಾರದ ಗದ್ದುಗೆ ಏರಿದ ಬಳಿಕ ಅತ್ಯಂತ ನಿಕೃಷ್ಟವಾಗಿ ಈ ಸಮುದಾಯಗಳನ್ನು ಬಿಜೆಪಿ ನಡೆಸಿಕೊಳ್ಳುತ್ತದೆ ಎಂಬುದಕ್ಕೆ ಈಗಿನ ಕೇಂದ್ರ ಸಚಿವ ಸಂಪುಟದಲ್ಲಿ ಆಗಿರುವ ಅನ್ಯಾಯವೇ ಸ್ಪಷ್ಟ ಉದಾಹರಣೆ ಎಂದು ಹೇಳಿದ್ದಾರೆ.

ರಾಜ್ಯದಲ್ಲಿ ಮಾದಿಗ, ಭೋವಿ, ನಾಯಕ ಹಾಗೂ ಒಬಿಸಿ ವರ್ಗದ ಅನೇಕರು ಎನ್.ಡಿ.ಎ ಒಕ್ಕೂಟದಡಿ ಗೆದ್ದಿದ್ದಾರೆ. ಆದರೆ, ಇವರ್ಯಾರಿಗೂ ಮಂತ್ರಿ ಸ್ಥಾನ ನೀಡದೇ ನೀವುಗಳು ನಮ್ಮ ಕಾಲಾಳುಗಳು. ಮತ ಹಾಕಲಷ್ಟೇ ನೀವು ನಮಗೆ ಬೇಕು, ಅಧಿಕಾರ ಬಂದ ಬಳಿಕ ನೀವು ಬೇಕಿಲ್ಲ ಎಂಬುದನ್ನು ಬಿಜೆಪಿ ಸ್ಪಷ್ಟವಾಗಿ ತನ್ನ ವರ್ತನೆ ಮೂಲಕ ತೋರ್ಪಡಿಸಿದೆ ಎಂದು ದೂರಿದ್ದಾರೆ.

ಇನ್ನೂ ರಾಜ್ಯದಲ್ಲಿ ಬಹುದೊಡ್ಡ ಸಂಖ್ಯೆಯಲ್ಲಿರುವ ಕುರುಬ ಸಮುದಾಯಕ್ಕೆ ಒಂದು ಟಿಕೆಟ್ ನೀಡಲಿಲ್ಲ. ಇದನ್ನು ಪ್ರಶ್ನಿಸಿದ ಪಕ್ಷದ ಕಟ್ಟಾಳು ಕೆ.ಎಸ್.ಈಶ್ವರಪ್ಪ ಅವರನ್ನೇ ಉಚ್ಚಾಟಿಸಿ, ಹಿಂದುಳಿದ ಹಿರಿಯಣ್ಣನ ಸ್ಥಾನದಲ್ಲಿರುವ ಕುರುಬ ಸಮುದಾಯಕ್ಕೆ ಅಪಮಾನ ಮಾಡಿದೆ. ಜೊತೆಗೆ ಬಿ.ಎಸ್.ಯಡಿಯೂರಪ್ಪ ಅವರ ವಿರುದ್ಧ ರಾಜಕಾರಣ ಮಾಡುವ ವ್ಯಕ್ತಿಗಳಿಗೆ ಕೇಂದ್ರ ಸಚಿವ ಸಂಪುಟದಲ್ಲಿ ಸ್ಥಾನ ನೀಡಲಾಗಿದೆ. ಈ ಮೂಲಕ ತಾನು ಲಿಂಗಾಯತ ವರ್ಗದ ವಿರೋಧಿ ಎಂಬುದನ್ನು ಸಚಿವ ಸಂಪುಟ ರಚನೆ ವೇಳೆ ಸ್ಪಷ್ಟವಾಗಿ ಬಿಜೆಪಿ ಹೇಳಿದೆ ಎಂದಿದ್ದಾರೆ.



ಆದ್ದರಿಂದ ವೀರಶೈವ ಲಿಂಗಾಯತ ಹಾಗೂ ಅಹಿಂದ ವರ್ಗ ಈಗಲೇ ಸಿಡಿದೇಳಬೇಕು. ತಕ್ಷಣ ನಮ್ಮ ರಾಜಕೀಯ ಹಕ್ಕು ಆಗಿರುವ ಕ್ಯಾಬಿನೆಟ್ ದರ್ಜೆಯ ಖಾತೆ ನೀಡುವಂತೆ ಒತ್ತಡ ತರಬೇಕು. ಇಲ್ಲದಿದ್ದರೇ ಜಿಲ್ಲಾ, ತಾಲ್ಲೂಕು ಪಂಚಾಯಿತಿ, ಬಿಬಿಎಂಪಿ ಸೇರಿ ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಬಿಜೆಪಿ ಪಕ್ಷವನ್ನು ಧೂಳಿಪಟ ಮಾಡಲು ಸಂಕಲ್ಪ ಮಾಡಬೇಕು. ನಮ್ಮನ್ನು ಮತ ಬ್ಯಾಂಕ್ ಮಾಡಿಕೊಂಡು, ಅಧಿಕಾರದ ಬಾಗಿಲಿನಿಂದ ತಬ್ಬುವ ಬಿಜೆಪಿಗೆ ತಕ್ಕ ಪಾಠ ಕಲಿಸಬೇಕು. ಈ ವಿಷಯದಲ್ಲಿ ಮುಖ್ಯವಾಗಿ ವೀರಶೈವ ಲಿಂಗಾಯತ ಸಮುದಾಯ ಜನಜಾಗೃತಿಗೆ ಮುಂದಾಗಬೇಕು. ಈ ಹೋರಾಟಕ್ಕೆ ಅಹಿಂದ ವರ್ಗ ಬೆಂಬಲವಾಗಿ ನಿಲ್ಲಬೇಕು. ಈ ಮೂಲಕ ಮತದಾನವಷ್ಟೇ ಅಲ್ಲ; ಅಧಿಕಾರವೂ ನಮ್ಮ ಹಕ್ಕು ಎಂಬುದನ್ನು ಮಂಡಿಸಬೇಕು ಎಂದು ಕೋರಿದ್ದಾರೆ.

**ಭದ್ರಾ ಮೇಲ್ದಂಡೆ ಅಭಿವೃದ್ಧಿಗೆ ಅಸಹಕಾರ, ಘೇರಾವ್ ಎಚ್ಚರಿಕೆ:** ಕರುನಾಡು ವತಿಯಿಂದ ರಾಜ್ಯಸಭೆ ಪ್ರತಿನಿಧಿಸುವ ನಿರ್ಮಲಾ ಸೀತರಾಮನ್, ರಾಜ್ಯದ ಅಭಿವೃದ್ಧಿ ಹಾಗೂ ಮಧ್ಯಕರ್ನಾಟಕಕ್ಕೆ ನೀರುಣಿಸುವ ಭದ್ರಾ ಮೇಲ್ದಂಡೆ ಯೋಜನೆಗೆ ಅಸಹಕಾರ ತೋರಿಸುವ ಮೂಲಕ ತೀವ್ರ ಅನ್ಯಾಯ ಮಾಡಿದ್ದು, ಈಗಲೂ ತಮ್ಮ ನಡೆ ಮುಂದುವರಿಸಿದರೇ ಅವರ ರಾಜ್ಯ ಪ್ರವೇಶದ ವೇಳೆ ಘೇರಾವ್ ಹಾಕಲಾಗುವುದು ಎಂದು ಎಚ್. ಆಂಜನೇಯ ಎಚ್ಚರಿಸಿದ್ದಾರೆ.

ಕಳೆದ ಅಧಿಕಾರದ ಅವಧಿ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಇದ್ದಾಗಲೂ ಬಳಿಕ ಕಾಂಗ್ರೆಸ್ ಸರ್ಕಾರದಲ್ಲಂತೂ ನಮ್ಮ ಪಾಲಿನ ತೆರಿಗೆ ನೀಡದೆ ವಂಚಿಸಿ ಒಕ್ಕೂಟ ವ್ಯವಸ್ಥೆಗೆ ಧಕ್ಕೆ ತಂದಿದ್ದರು. ಜೊತೆಗೆ ಭದ್ರಾ ಮೇಲ್ದಂಡೆ ಯೋಜನೆಗೆ ಬಜೆಟ್ ನಲ್ಲಿ ಘೋಷಿಸಿದ್ದ 5300 ಕೋಟಿ ಹಣದಲ್ಲಿ ಒಂದು ರುಪಾಯಿ ಬಿಡುಗಡೆ ಮಾಡದೇ ಅನ್ಯಾಯ ಮಾಡಲಾಯಿತು. ಬಿಜೆಪಿಯ 25 ಸಂಸದರು ಖಂಡಿಸದೆ ಮೌನವಹಿಸಿ ತಮ್ಮನ್ನು ಗೆಲ್ಲಿಸಿದ ಕನ್ನಡಿಗರಿಗೆ ಅನ್ಯಾಯ ಮಾಡಿದ್ದರು. ಈಗಲೂ ನಿರ್ಮಲಾ ಸೀತಾರಾಮನ್ ಅವರು ರಾಜ್ಯದ ಅಭಿವೃದ್ಧಿಗೆ ನಿರ್ಲಕ್ಷ್ಯ ವಹಿಸಿದರೆ ಘೇರಾವ್ ಹಾಕಲಾಗುವುದು ಎಂದು ಎಚ್ಚರಿಸಿದ್ದಾರೆ.

**ಕನ್ನಡಿಗರಿಗೆ ಪ್ರಧಾನಿ ಹುದ್ದೆ ನೀಡಿದ್ದು ಕಾಂಗ್ರೆಸ್:** ಕಾಂಗ್ರೆಸ್ ಪಕ್ಷ ಕೇಂದ್ರದಲ್ಲಿ ಅಧಿಕಾರ ನಡೆಸಿದ ಸಂದರ್ಭದಲ್ಲಿ ರಾಜ್ಯದ ಸಂಸದರಿಗೆ ಉತ್ತಮ ಖಾತೆ ನೀಡಿ ಕರುನಾಡನ್ನು ಗೌರವಿಸಿತ್ತು. ಆದರೆ, ಬಿಜೆಪಿ ಸರ್ಕಾರ ಸಂಪೂರ್ಣ ನಿರ್ಲಕ್ಷಿಸಿದೆ ಎಂದು ಆಂಜನೇಯ ದೂರಿದ್ದಾರೆ.

ಸಿ.ಕೆ.ಜಾಫರ್ ಷರೀಫ್‌ಗೆ ರೈಲ್ವೆ, ಎಸ್.ಎಂ.ಕೃಷ್ಣ ಅವರಿಗೆ ವಿದೇಶಾಂಗ, ಕೆ.ಎಚ್.ಮುನಿಯಪ್ಪ ಅವರಿಗೆ ಹೆದ್ದಾರಿ ಹೀಗೆ ಅನೇಕರಿಗೆ ಪ್ರಮುಖ ಖಾತೆ ನೀಡುವ ಮೂಲಕ ರಾಜ್ಯದ ಅಭಿವೃದ್ಧಿಗೆ ಸಹಕರಿಸಿತ್ತು. ಜೊತೆಗೆ ಪ್ರಧಾನಿ ಹುದ್ದೆ ಎಚ್.ಡಿ.ದೇವೇಗೌಡರು ಅಲಂಕರಿಸಲು ಬೆಂಬಲ ವ್ಯಕ್ತಪಡಿಸಿ, ಕನ್ನಡದ ವ್ಯಕ್ತಿ ಮೊದಲ ಬಾರಿಗೆ ಪ್ರಧಾನಿಯನ್ನಾಗಿ ಮಾಡಿದ ಹೆಮ್ಮೆ ಕಾಂಗ್ರೆಸ್ ಪಕ್ಷಕ್ಕೆ ಇದೆ. ಆದರೆ, ಬಿಜೆಪಿ ರಾಜ್ಯದ ಲಿಂಗಾಯತರು ಮತ್ತು ಅಹಿಂದ ವರ್ಗವನ್ನು ಕೇವಲ ಮತಗಳಿಗೆ ಸೀಮಿತ ಮಾಡಿಕೊಂಡು ಬಣ್ಣದ ಮಾತಿನಲ್ಲಿ ವಂಚಿಸುತ್ತಿದೆ. ಈ ಕುರಿತು ಕನ್ನಡಿಗರು ಅದರಲ್ಲೂ ಲಿಂಗಾಯತ, ಅಹಿಂದ ಸಮುದಾಯ ಹೆಚ್ಚು ಎಚ್ಚರಿಕೆ ವಹಿಸಬೇಕು. ಬಿಜೆಪಿಯ ನಯವಂಚನೆ ವಿರುದ್ಧ ಸಿಡಿದೇಳಬೇಕು ಎಂದು ಎಚ್.ಆಂಜನೇಯ ತಿಳಿಸಿದ್ದಾರೆ.

## ಫಾಸ್ಟ್ ನ್ಯೂಸ್

### ಮೊಳಕಾಲ್ಮೂರುನಲ್ಲಿ 12.2 ಮಿ.ಮೀ ಮಳೆ



» ಚಿತ್ರದುರ್ಗ

ಭಾನುವಾರ ಸುರಿದ ಮಳೆಯ ವಿವರದನ್ವಯ ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರುನಲ್ಲಿ 12.2 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮೂರು ತಾಲ್ಲೂಕಿನ ಬಿಜಿಕೆರೆ 8.4 ಮಿ.ಮೀ, ರಾಂಪುರ 6.2 ಮಿ.ಮೀ, ದೇವಸಮುದ್ರ 4 ಮಿ.ಮೀ. ರಾಯಾಪುರ 9.6ಮಿ.ಮೀ ಮಳೆಯಾಗಿದೆ. ಚಳ್ಳಕೆರೆ ತಾಲ್ಲೂಕಿನ ನಾಯಕನಹಟ್ಟಿ 1.8 ಮಿ.ಮೀ, ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 1.4 ಮಿ.ಮೀ ಹಾಗೂ ಹಿರಿಯೂರು ತಾಲ್ಲೂಕಿನ ಹಿರಿಯೂರಿನಲ್ಲಿ 0.6 ಮಿ.ಮೀ, ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗ–1ರಲ್ಲಿ 1 ಮಿ.ಮೀ, ಚಿತ್ರದುರ್ಗ–2ರಲ್ಲಿ 1 ಮಿ.ಮೀ, ತುರುವನೂರು 1.6 ಮಿ.ಮೀ, ಭರಮಸಾಗರ 8 ಮಿ.ಮೀ ಮಳೆಯಾಗಿದೆ.ಶನಿವಾರ ಹಾಗೂ ಭಾನುವಾರ ಸುರಿದ ಮಳೆಗೆ ಜಿಲ್ಲಾಯಾದ್ಯಂತ ಒಟ್ಟು 11 ಮನೆಗಳು ಭಾಗಶಃ ಹಾನಿಯಾಗಿವೆ. ಚಿತ್ರದುರ್ಗ ತಾಲ್ಲೂಕಿನಲ್ಲಿ ಭಾಗಶಃ 2 ಮನೆ ಹಾನಿಯಾಗಿದೆ. ಹಿರಿಯೂರು ತಾಲ್ಲೂಕಿನಲ್ಲಿ ಭಾಗಶಃ 4 ಮನೆ, ಹೊಳಲ್ಕೆರೆ ತಾಲ್ಲೂಕಿನಲ್ಲಿ ಭಾಗಶಃ 3 ಮನೆ ಹಾಗೂ ಮೊಳಕಾಲ್ಮೂರು ತಾಲ್ಲೂಕಿನಲ್ಲಿ ಭಾಗಶಃ 2 ಮನೆ ಹಾನಿಯಾಗಿವೆ ಎಂದು ಜಿಲ್ಲಾಧಿಕಾರಿ ಕಚೇರಿ ಪ್ರಕಟಣೆ ತಿಳಿಸಿದೆ.

### ಕ್ಷಿಪ್ರ ಪ್ರಸಾದ ಮಹಾ ಗಣಪತಿ ದೇವಸ್ಥಾನದಲ್ಲಿ 11ನೆ ವಾರ್ಷಿಕೋತ್ಸವ



» ಚಿತ್ರದುರ್ಗ

ದವಳಗಿರಿ ಬಡಾವಣೆಯಲ್ಲಿರುವ ಕ್ಷಿಪ್ರ ಪ್ರಸಾದ ಮಹಾಗಣಪತಿ ದೇವಸ್ಥಾನದಲ್ಲಿ ಹನ್ನೊಂದನೆ ವಾರ್ಷಿಕೋತ್ಸವ ಸಮಾರಂಭದ ಅಂಗವಾಗಿ ಸೋಮವಾರ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು. ಕ್ಷಿಪ್ರ ಪ್ರಸಾದ ಮಹಾಗಣಪತಿಗೆ ಪಂಚಾಮೃತ ಸಹಿತ ರುದ್ರಾಭಿಷೇಕ, ನವಗ್ರಹ ಪುರಸ್ಸರ ಅಷ್ಟದ್ರವ್ಯ ಮಹಾಗಣಪತಿ ಹೋಮ, ಪೂರ್ಣಾಹುತಿ, ಅಲಂಕಾರ ನಂತರ ಮಹಾಮಂಗಳರಾತಿ ನಡೆಯಿತು.ಸಂಜೆ ದವಳಗಿರಿ ಬಡಾವಣೆ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನೆರವೇರಿತು.ಮಾಜಿ ಶಾಸಕರುಗಳಾದ ಜಿ.ಹೆಚ್. ತಿಪ್ಪಾರೆಡ್ಡಿ, ಎಸ್.ಕೆ.ಬಸವರಾಜನ್, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಟಿ.ಭದ್ರಿನಾಥ್, ಶ್ರೀನಿವಾಸ್, ಗುರುಮೂರ್ತಿ, ಚನ್ನಕೇಶವುಲು ಸೇರಿದಂತೆ ಸಾವಿರಾರು ಭಕ್ತರು ಸೇರಿದ್ದರು.

# 3 ಹಂತದಲ್ಲಿ ಬರ ಪರಿಹಾರ ಹಣ ಕೊಡಿ



» ಚಿತ್ರದುರ್ಗ

ಎನ್.ಡಿ.ಆರ್.ಎಫ್. ನಿಯಮದ ಪ್ರಕಾರ ನೀರಾವರಿ, ತೋಟಗಾರಿಕೆ ಬೆಳೆಗಳಿಗೆ ಮೂರು ಹಂತದಲ್ಲಿ ಬರ ಪರಿಹಾರ ಹಣ ಕೊಡಬೇಕು. ಇದುವರೆವಿಗೂ ರೈತರ ಬ್ಯಾಂಕ್ ಖಾತೆಗಳಿಗೆ ಜಮಾ ಆಗಿಲ್ಲ. ಇದೆ ಪರಿಸ್ಥಿತಿ ಮುಂದುವರೆದರೆ ಹೋರಾಟ ನಡೆಸಬೇಕಾಗುತ್ತದೆಂದು ಅಖಂಡ ಕರ್ನಾಟಕ ರೈತ ಸಂಘದ ರಾಜ್ಯಾಧ್ಯಕ್ಷ ಸೋಮಗುದ್ದು ರಂಗಸ್ವಾಮಿ ಎಚ್ಚರಿಸಿದರು.ಪ್ರವಾಸಿ ಮಂದಿರದಲ್ಲಿ ಸೋಮವಾರ ರೈತರೊಂದಿಗೆ ಸಭೆ ನಡೆಸಿ ಮಾತನಾಡಿದ ಸೋಮಗುದ್ದು ರಂಗಸ್ವಾಮಿ ಕಳೆದ ವರ್ಷ ಮಳೆಯಿಲ್ಲದೆ ಎದುರಾದ ಭೀಕರ ಬರಗಾಲಕ್ಕೆ ತುತ್ತಾಗಿರುವ ರೈತರು ಸಂಕಷ್ಟದಲ್ಲಿದ್ದಾರೆ. ಸರ್ಕಾರ ಇತ್ತ ಗಮನ ಹರಿಸಿ ಉಚಿತವಾಗಿ ಬೀಜ, ಗೊಬ್ಬರ ಮತ್ತು ಕೃಷಿ ಪರಿಕರಗಳನ್ನು ನೀಡಬೇಕು. ರೈತರಿಗೆ ಸಕಾಲಕ್ಕೆ ಸಾಲ ನೀಡದೆ ಬ್ಯಾಂಕಿನವರು ಸತಾಯಿಸುತ್ತಿದ್ದು, ಶೋಷಣೆ ನಿಲ್ಲಬೇಕು. ಎಲ್ಲಾ ಬ್ಯಾಂಕ್‌ನ ಹಾಗೂ ಸಂಘ ಸಂಸ್ಥೆಗಳಲ್ಲಿನ ಸಾಲ ಮನ್ನ ಮಾಡಬೇಕು ಎಂದರು. ಜಿಲ್ಲೆಯಲ್ಲಿನ ಎಲ್ಲಾ ಕೆರೆಗಳಿಗೆ ನೀರು ತುಂಬಿಸಬೇಕು. ಕೆ.ಎಸ್.ಆರ್.ಟಿ.ಸಿ. ಬಸ್ ದರ ಹೆಚ್ಚಿಸಲು ತೀರ್ಮಾನಿಸಿರುವುದು ಪ್ರಯಾಣಿಕರಿಗೆ ಮತ್ತಷ್ಟು ಹೊರೆಯಾಗಲಿದೆ. ರೈತರು ಜಮೀನುಗಳಿಗೆ ಓಡಾಡಲು ದಾರಿ ಸಮಸ್ಯೆಯಿದೆ. ಸರ್ಕಾರ ಮಧ್ಯ ಪ್ರವೇಶಿಸಿ ಸಮಸ್ಯೆಯನ್ನು ಇತ್ಯರ್ಥಪಡಿಸಿ ರೈತರ ನೆರವಿಗೆ ಮುಂದಾಗಬೇಕು. ಇಲ್ಲವಾದಲ್ಲಿ ರೈತ ಸಂಘಟನೆ ಜೊತೆ ಸೇರಿ ಉಗ್ರ ಹೋರಾಟದ ದಾರಿ ಹಿಡಿಯಬೇಕಾಗುತ್ತದೆಂದು ಸೋಮಗುದ್ದು ರಂಗಸ್ವಾಮಿ ತೀರ್ಮಾನಿಸಿದರು.ಅಖಂಡ ಕರ್ನಾಟಕ ರೈತ ಸಂಘದ ಜಿಲ್ಲಾಧ್ಯಕ್ಷ ಎಲ್.ಬಸವರಾಜಪ್ಪ ಅಳಗವಾಡಿ, ಗೌರವಾಧ್ಯಕ್ಷ ಜಿ.ಮೇಘರಾಜ್ ಹಳಿಯೂರು, ಕುರುಬರಹಳ್ಳಿ ಶಿವಣ್ಣ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ಸಿದ್ದಪ್ಪ ಹಳಿಯೂರು, ಸಂಘಟನಾ ಕಾರ್ಯದರ್ಶಿ ಜಿ.ಪರಮೇಶ್ವರಪ್ಪ, ಖಾದರ್‌ಭಾಷ, ನವೀನ್‌ಕುಮಾರ್, ಹೆಚ್.ನಿರಂಜನಮೂರ್ತಿ, ಬೊಮ್ಮಯ್ಯ, ಎ.ಎಸ್.ಗುರುಸಿದ್ದಪ್ಪ, ಏಕಾಂತಪ್ಪ, ಚಳ್ಳಕೆರೆ ತಾಲ್ಲೂಕು ರೈತ ಸಂಘದ ಅಧ್ಯಕ್ಷ ಚಿಕ್ಕಣ್ಣ ಹಾಜರಿದ್ದರು.

### ಚನ್ನಮ್ಮನಾಗತಿಹಳ್ಳಿ : ನಕಾಷೆಯಲ್ಲಿ ದಾರಿನಮೂದಿಸಿದರೂ ದಾರಿ ಬಿಡದೆ ಅಡ್ಡಗಾಲು; ತಹಶೀಲ್ದಾರ್‌ಗೆ ಮನವಿ



» ಚಳ್ಳಕೆರೆ

ತಾಲ್ಲೂಕಿನ ಚನ್ನಮ್ಮನಾಗತಿಹಳ್ಳಿ ಗ್ರಾಮದ ಕೆಲ ಜಮೀನುಗಳಿಗೆ ಹೋಗಲು ನಕಾಶೆ ದಾರಿ ಬಿಡಿಸುವಂತೆ ಒತ್ತಾಯಿಸಿ ಗ್ರಾಮಸ್ಥರು ತಹಶೀಲ್ದಾರ್ ಮನವಿ ಅರ್ಪಿಸಿದರು.

ಕಳೆದ ಹಲವಾರು ವರ್ಷಗಳಿಂದ ಗ್ರಾಮದ ರಿ.ಸರ್ವೆ.ನಂ.66/2, 66/3, 67,68,69,70 ರಿಂದ 150 ಸರ್ವೆ ನಂಬರ್ ಜಮೀನಿಗೆ ಓಡಾಡಲು ದಾರಿ ಇಲ್ಲದೆ ಕೆರೆಯಂಗಳದಲ್ಲೇ ಓಡಾಟ ನಡೆಸುತ್ತಿದ್ದೇವೆ. ಆದರೆ ಕಳೆದ ವರ್ಷ ಮಳೆಯಿಂದ ಜಮೀನುಗಳಿಗೆ ಓಡಾಟ ನಡೆಸಲು ಅಡ್ಡಿ ಉಂಟಾಯಿತು. ಈ ಬಾರಿಯೂ ಅತಿಹೆಚ್ಚು ಮಳೆಯಾಗ ಸಂಭವವಿದ್ದು, ರೈತರು ಬಿತ್ತನೆ ಮಾಡಲು ಸಿದ್ದತೆ ಮಾಡಿಕೊಂಡಿದ್ದಾರೆ, ಬೆಳೆದ ಬೆಳೆಯನ್ನು ಸಾಗಿಸಲು ದಾರಿಯ ಅವಶ್ಯಕತೆ ಇದೆ. ಬಿತ್ತನೆ ಮಾಡಿದ ನಂತರ ಮಳೆ ಬಂದು ಕೆರೆ ತುಂಬಿದಲ್ಲಿ ನಮ್ಮ ಜಮೀನುಗಳಿಗೆ ಹೋಗಲು ದಾರಿಯೆ ಇಲ್ಲದಾಗುತ್ತದೆ.

ಪುಟ ↘ 2

## ಪ್ರಮುಖ ಸುದ್ದಿ

### ಕಣ್ಣು, ಕಿವಿ ಮತ್ತು ಎದೆಯ ಭಾಗಕ್ಕೆ ಪರಚಿ ಗಾಯ

# ಜಮೀನಿಗೆ ತೆರಳುತ್ತಿದ್ದ ರೈತನ ಮೇಲೆ ಕರಡಿ ದಾಳಿ

» ಹೊಸದುರ್ಗ

ತಾಲೂಕಿನಲ್ಲಿ ದಿನದಿಂದ ದಿನಕ್ಕೆ ಕರಡಿಗಳ ಹಾವಳಿ ಹೆಚ್ಚಾಗಿದ್ದು, ಹಾಡಹಗಲೇ ಹೊಸದುರ್ಗ ಪಟ್ಟಣದ ಹಲವು ಬಡಾವಣೆಗಳಲ್ಲಿ ಕರಡಿಗಳು ಕಾಣಿಸಿಕೊಳ್ಳುತ್ತಿದ್ದು ನಿತ್ಯವೂ ಜನರು ಆತಂಕದಲ್ಲಿಯೇ ಜೀವನ ದೂಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಕರಡಿ ದಾಳಿಗೆ ರೈತನೊಬ್ಬ ಗಂಭೀರವಾಗಿ ಗಾಯಗೊಂಡಿರುವ ಘಟನೆ ಸೋಮವಾರ ಬೆಳಗ್ಗೆ ನಡೆದಿದೆ.

ತಾಲೂಕಿನ ಯಲಕ್ಕಪ್ಪನಹಟ್ಟಿ ಸಮೀಪದ ಸಿದ್ದಪ್ಪನಬೆಟ್ಟದ ಬಳಿಯಿರುವ ಜಮೀನಿಗೆ ಭಾನುವಾರ ರಾತ್ರಿ ದಿನೇಶ್ ಎಂಬ ರೈತ ತೆರಳುತ್ತಿದ್ದ ವೇಳೆ ಕರಡಿಯೊಂದು ಏಕಾಏಕಿ ದಾಳಿ ಮಾಡಿ, ಗಂಭೀರ ಗಾಯಗೊಳಿಸಿದೆ. ರೈತನ ಮೇಲೆ ಎರಗಿದ ಕರಡಿ ಮುಖ, ಕಣ್ಣು, ಕಿವಿ, ಎದೆ ಭಾಗಕ್ಕೆ ಪರಚಿ ಗಂಭೀರ ಗಾಯಗೊಳಿಸಿದ ಘಟನೆ ಸಾರ್ವಜನಿಕರನ್ನು ಬೆಚ್ಚಿ ಬೀಳುವಂತೆ ಮಾಡಿದೆ. ಜೋರಾಗಿ ಕಿರುಚಾಡಿದ್ದರಿಂದ ಕರಡಿ ಬಿಟ್ಟು ಓಡಿಹೋಗಿದೆ. ಗಾಯಗೊಂಡಿದ್ದ ವ್ಯಕ್ತಿಯನ್ನು ತಕ್ಷಣವೇ ಪಟ್ಟಣದ ಆಸ್ಪತ್ರೆಗೆ ದಾಖಲಿತವಾಗಿತ್ತು. ವೈದ್ಯರು ಗಾಯಗಳಿಗೆ ಹೊಲಿಗೆ ಹಾಕಿ ಚಿಕಿತ್ಸೆ ನೀಡಿದರು. ಇನ್ನೂ ಹೆಚ್ಚಿನ ಚಿಕಿತ್ಸೆಗಾಗಿ ಶಿವಮೊಗ್ಗದ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ತಿಳಿದು ಬಂದಿದೆ.



ತಾಲೂಕಿನ ಬಹುತೇಕ ಗ್ರಾಮೀಣ ಭಾಗದಲ್ಲಿ ಆಗಾಗ ಕರಡಿಗಳು ಕಾಣಿಸಿಕೊಳ್ಳುತ್ತಿದ್ದು, ರೈತರು ಜೀವ ಬಿಗಿ ಹಿಡಿದುಕೊಂಡು ಜಮೀನುಗಳಿಗೆ ಹೋಗಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಕರಡಿಗಳ ಹಾವಳಿ ಬಗ್ಗೆ ಸಾರ್ವಜನಿಕರು ಹಲವು ಬಾರಿ ಅರಣ್ಯ ಇಲಾಖೆಗೆ ದೂರು ನೀಡುತ್ತಲೆ ಬಂದಿದ್ದಾರೆ. ಪಟ್ಟಣದ ಜಂಗಮ ನಗರ, ಕುಂಚಿಟಿಗ ಮಠ, ಸಿದ್ದರಾಮನಗರ, ಶಾಂತಿನಗರ ಇನ್ನಿತರ ಕಡೆಗಳಲ್ಲಿ ವರ್ಷದ ಹಿಂದೆ ಕಾಣಿಸಿಕೊಂಡಿದ್ದ ಕರಡಿಗಳನ್ನು ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಿಡಿದು ಅರಣ್ಯಕ್ಕೆ ಬಿಡುವಲ್ಲಿ ಯಶಸ್ವಿಯಾಗಿದ್ದರು. ಮತ್ತೆ ಇದೀಗ, ಹಲವು ಕಡೆಗಳಲ್ಲಿ ಕರಡಿಗಳು ಕಾಣಿಸಿಕೊಳ್ಳುತ್ತಿದ್ದು, ಕೂಡಲೇ ಅರಣ್ಯ ಇಲಾಖೆಯವರು ಎಚ್ಚೆತ್ತುಕೊಂಡು ಬೋನುಗಳನ್ನು ಇಟ್ಟು ಕರಡಿಗಳನ್ನು ಹಿಡಿದು ಅರಣ್ಯಕ್ಕೆ ಬಿಡಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

## ಫಾಸ್ಟ್ ನ್ಯೂಸ್

### ಡಿಪ್ಲೊಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

2024-25ನೇ ಸಾಲಿಗೆ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಚಿತ್ರದುರ್ಗ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ ಐಟಿಐ, ಪಿಯುಸಿ (ತಾಂತ್ರಿಕ ವಿಷಯಗಳು) ಉತ್ತೀರ್ಣರಾದ ವಿದ್ಯಾರ್ಥಿಗಳಿಂದ 2ನೇ ವರ್ಷ, 3ನೇ ಸೆಮಿಸ್ಟರ್ ಡಿಪ್ಲೊಮಾಗೆ ಲ್ಯಾಟರಲ್ ಎಂಟ್ರಿ ಸ್ಕೀಂನಡಿಯಲ್ಲಿ ಆಫ್‌ಲೈನ್ ಮುಖಾಂತರ ಪ್ರವೇಶ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಐ.ಟಿ.ಐ, ಪಿ.ಯು.ಸಿ ತಾಂತ್ರಿಕ ವಿಷಯದಲ್ಲಿ ಉತ್ತೀರ್ಣರಾದ ಆಸಕ್ತ ಅಭ್ಯರ್ಥಿಗಳು www.dtek.kar.nic.in ತಂತ್ರಾಂಶದ ಮೂಲಕ ಅರ್ಜಿಯನ್ನು ಡೌನ್ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಯೊಂದಿಗೆ, ಸಾಮಾನ್ಯ ಅಭ್ಯರ್ಥಿಗಳು ರೂ.100 ಹಾಗೂ ಎಸ್.ಸಿ, ಎಸ್.ಟಿ, ಪ್ರ.ವರ್ಗ-1 ರ ಅಭ್ಯರ್ಥಿಗಳು ರೂ.50 ಶುಲ್ಕದೊಂದಿಗೆ ಚಿತ್ರದುರ್ಗ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗೆ ಸಲ್ಲಿಸಬೇಕು. ಈಗಾಗಲೇ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭವಾಗಿದ್ದು, ಜೂನ್ 25 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಜೂನ್ 26ರಂದು ಮೆರಿಟ್ ಪಟ್ಟಿಯನ್ನು ಪ್ರಕಟಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

### ನಕಾಷೆಯಲ್ಲಿ ದಾರಿನಮೂದಿಸಿದರೂ ದಾರಿ ಬಿಡದೆ ಅಡ್ಡಗಾಲು; ತಹಶೀಲ್ದಾರ್‌ಗೆ ಮನವಿ

» **ಮೊದಲ ಪುಟದಿಂದ**

ಆದರಿದ್ದ ನಕಾಶೆ ದಾರಿಯನ್ನು ಬಿಡಿಸಿ ರೈತರು ಜಮೀನು ಕಾರ್ಯ ಮಾಡಿಕೊಳ್ಳಲು ಅನುವು ಮಾಡಿಕೊಡಬೇಕೆಂದರು. ನಮ್ಮ ಹೊಲದ ನಕಾಶೆ ದಾರಿಯನ್ನು ಒತ್ತುವರಿ ಮಾಡಿಕೊಂಡು ಸಾಗುವಳಿ ಮಾಡಿಕೊಂಡಿರುವುದರಿಂದ ಮುಂದಿನ ಜಮೀನಿನಗಳಿಗೆ ಹೋಗಲು ದಾರಿ ಇಲ್ಲವಾಗಿದೆ. ಕೆರೆಯ ದಾರಿಯನ್ನೆ ನೆಚ್ಚಿಕೊಂಡು ಕೆಲಸ ಕಾರ್ಯ ಮಾಡಲು ಸಾಧ್ಯವಿಲ್ಲ. ದಾರಿ ಬಿಡಿಸುವಂತೆ ಕಳೆದ ಎರಡ್ಮೂರು ವರ್ಷಗಳಿಂದ ಮನವಿ ನೀಡುತ್ತಲ್ಲೇ ಬಂದಿದ್ದೇವೆ ಆದರೆ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದಾರೆ. ಈ ಬಾರಿಯಾದರೂ ಕೆಲಸ ಮಾಡಿಕೊಡಿ ಎಂದು ಮನವಿ ಮಾಡಿದರು. ಮನವಿ ಸ್ವೀಕರಿಸಿದ ತಹಶೀಲ್ದಾರ್ ರೇಹಾನ್‌ಪಾಷ ಕಂದಾಯ ಇಲಾಖೆ ದಾಖಲೆ ಪ್ರಕಾರ ದಾರಿಯ ನಕಾಷೆ ಇದ್ದು ಇದಕ್ಕೆ ಯಾರೂ ಅಡ್ಡಿಪಡಿಸಲು ಬರುವುದಿಲ್ಲ. ಈ ಬಗ್ಗೆ ಸಂಬಂಧಪಟ್ಟ ಕಂದಾಯ ಅಧಿಕಾರಿ ಹಾಗೂ ಶಿರಸ್ಥೇದಾರರನ್ನು ಸ್ಥಳಕ್ಕೆ ಕಳಿಸಿ ಅಳತೆ ಮಾಡಿಸಿ ಸರ್ಕಾರದ ಕಾನೂನಿನಂತೆ ನಕಾಷೆ ದಾರಿಯಲ್ಲೇ ರೈತರು ಓಡಾಟ ಮಾಡಲು ಅನುವು ಮಾಡಿಕೊಡುವ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ಶಿವಣ್ಣ, ಶಿಲ್ಪಾರಾಣಿಬಸವರಾಜು, ಈರಣ್ಣ, ತಿಪ್ಪೇಸ್ವಾಮಿ, ತಮ್ಮಣ್ಣ, ಹೊಟ್ಟೇರಪ್ಪ, ವೀರಪ್ಪ, ಗೌಡ್ರತಮ್ಮಣ್ಣ, ಈ.ಬಾಲರಾಜು, ಸಣ್ಣಪ್ಪ, ಕೋಣಪ್ಪ, ತಿಪ್ಪೇಸ್ವಾಮಿ, ಈರಮ್ಮ, ಲಕ್ಷ್ಮಕ್ಕ, ಜಯಮ್ಮ ಮುಂತಾದವರು ಉಪಸ್ಥಿತರಿದ್ದರು.

### ಕೆರೆಹಿಂದಲಹಟ್ಟಿ ಸಾರ್ವಜನಿಕ ರಸ್ತೆಯಲ್ಲೇ ಜೂಜಾಟ: 3150ರೂ ಹಾಗೂ ನಾಲ್ವರ ವಶ.

» **ಚಳ್ಳಕೆರೆ**

ತಾಲ್ಲೂಕಿನ ಬುಡ್ನಹಟ್ಟಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆರೆಹಿಂದಲಹಟ್ಟಿ ರಂಗಮಂದಿರದ ಸಾರ್ವಜನಿಕ ರಸ್ತೆಯಲ್ಲಿ ಹಾಡುಹಗಲೇ ಜೂಜಾಟವಾಡುತ್ತಿದ್ದ ವ್ಯಕ್ತಿಗಳನ್ನು ವಶಕ್ಕೆ ಪಡೆದು ಆತನದಿಂದ ಜೂಜಾಟದ ಹಣ 3150ರೂಗಳನ್ನು ವಶಪಡಿಸಿಕೊಳ್ಳಲಾಗಿದೆ. ಠಾಣಾ ಪೇದೆ ವಿಶಾಲ್ ನೀಡಿದ ಮಾಹಿತಿ ಆಧರಿಸಿ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಪಿಎಸ್‌ಐ ಕೆ.ಸತೀಶ್‌ನಾಯ್ಕ ಮತ್ತು ಸಿಬ್ಬಂದಿ ವರ್ಗ ಕೆರೆಹಿಂದಲಹಟ್ಟಿಯ ರಂಗಮಂದಿರದ ಸಾರ್ವಜನಿಕ ರಸ್ತೆಯ ಬದಿಯಲ್ಲಿ ಮಧ್ಯಾಹ್ನ 3ರ ಸಮಯದಲ್ಲಿ ದಾಳಿ ನಡೆಸಿದ್ದಾರೆ. ಈ ಸಂದರ್ಭದಲ್ಲಿ ವರವು ಗ್ರಾಮದ ರುದ್ರಮುನಿ(35) ಹಾಗೂ ನಾಲ್ವರು ಜೂಜಾಟವಾಡುತ್ತಿದ್ದು, ಅವರು ಹಾಗೂ ಜೂಜಾಟದ ಹಣವನ್ನು ವಶಪಡಿಸಿಕೊಂಡು ಪ್ರಕರಣ ದಾಖಲು ಮಾಡಲಾಗಿದೆ.

### ಇಂದಿನಿಂದ 2 ದಿನಗಳ ಕಾಲ ವಿದ್ಯುತ್ ವ್ಯತ್ಯಯ

» **ಹೊಸದುರ್ಗ**

ರಸ್ತೆ ಅಗಲೀಕರಣ ಮತ್ತು ಒಳ ಚರಂಡಿ ಕಾಮಗಾರಿ ನಿರ್ವಹಿಸುತ್ತಿರುವುದರಿಂದ ಜೂನ್ 11 ರಂದು ಮಂಗಳವಾರ ಹಾಗೂ ಜೂನ್ 12 ರಂದು ಬುಧವಾರ ಒಟ್ಟು ಎರಡು ದಿನಗಳ ಕಾಲ ಬೆಳಿಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ತಾಲೂಕಿನ 66/11 ಕೆ.ವಿ ವಿದ್ಯುತ್ ವಿತರಣಾ ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಎಲ್ಲಾ 11 ಕೆ.ವಿ ಮಾರ್ಗಗಳಲ್ಲಿ ಅಂದರೆ ತಾಲೂಕಿನ ಮಧುರೆ 220/66/11 ಕೆ.ವಿ ವಿದ್ಯುತ್ ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ತಾಲೂಕಿನ ಕಸಬಾ ಹೋಬಳಿಯ ಮಧುರೆ, ದೇವಿಗೆರೆ ಮತ್ತು ಹೆಬ್ಬಳ್ಳಿ ಪಂಚಾಯಿತಿಯ ಎಲ್ಲಾ ಗ್ರಾಮಗಳು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು ಸಾರ್ವಜನಿಕರು ಸಹಕರಿಸಬೇಕೆಂದು ಬೆಸ್ಕಾಂ ಸಹಾಯಕ ಕಾರ್ಯನಿರ್ವಹಕ ಇಂಜಿನಿಯರ್ ಕಿರಣ್‌ರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಸಕ ರಘುಮೂರ್ತಿ 61ನೇ ಹುಟ್ಟುಹಬ್ಬ ಆಚರಣೆ

## ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಅಭಿವೃದ್ಧಿಯ ಮಹಾನ್ ಪುರುಷ ಶಾಸಕ ಟಿ.ರಘುಮೂರ್ತಿ: ಟಿ.ಪ್ರಭುದೇವ್





» **ಚಳ್ಳಕೆರೆ**

ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಅಭಿವೃದ್ಧಿಯನ್ನು ಇಡೀ ರಾಜ್ಯವೇ ಇಂದು ಪ್ರಶಂಸಿಸುತ್ತಿದೆ. ಬಯಲುಸೀಮೆಯ ಈ ಬರಡು ನಾಡಿನಲ್ಲಿ ಅಭಿವೃದ್ಧಿಯ ಪರ್ವವನ್ನೇ ಸ್ಥಾಪಿಸಿ ಇಡೀ ರಾಜ್ಯವೇ ಚಳ್ಳಕೆರೆ ಅಭಿವೃದ್ಧಿಯ ಬಗ್ಗೆ ಅಭಿಮಾನಪಡುವಂತಹ ಕಾರ್ಯ ಮಾಡಿರುವ ಈ ಕ್ಷೇತ್ರದ ಹ್ಯಾಟ್ರಿಕ್ ಹೀರೊ ಸಾಧಕರಾದ ಟಿ.ರಘುಮೂರ್ತಿಯವರ 61ನೇ ಹುಟ್ಟುಹಬ್ಬದಂದು ನಾವೆಲ್ಲರೂ ಮುಂದಿನ ದಿನಗಳಲ್ಲಿ ಇನ್ನಷ್ಟು ಶಕ್ತಿಶಾಲಿಯಾಗಿ ಬೆಳೆದು ಕ್ಷೇತ್ರದ ಅಭಿವೃದ್ಧಿಗೆ ಸಂಕಲ್ಪ ಮಾಡಲಿ ಎಂದು ಭಗವಂತನನ್ನು ಪ್ರಾರ್ಥಿಸೋಣವೆಂದು ಕಾಂಗ್ರೆಸ್ ಪಕ್ಷದ ಹಿರಿಯ ನಾಯಕ ಟಿ.ಪ್ರಭುದೇವ್ ತಿಳಿಸಿದರು.

ಅವರು, ಸೋಮವಾರ ನಗರದ ಶಾಸಕರ ಖಾಸಗಿ ನಿವಾಸದಲ್ಲಿ ಟಿ.ರಘುಮೂರ್ತಿ ಅನುಪಸ್ಥಿತಿಯಲ್ಲಿ ಅವರ 61ನೇ ಹುಟ್ಟುಹಬ್ಬ ಕಾರ್ಯಕ್ರಮ ಕೇಕ್ ಕತ್ತರಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷವನ್ನು ಸಂಘಟನಾತ್ಮಕವಾಗಿ ಎತ್ತರಕ್ಕೆ ಒಯ್ದ ಕೀರ್ತಿ ಅವರದ್ದು. ಅವರ ಸಾಧನೆ ಈ ಕ್ಷೇತ್ರದಲ್ಲಿ ಎಂದೂ ಶಾಶ್ವತವಾಗಿರುತ್ತದೆ ಎಂದರು. ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ಶಾಸಕ ಹುಟ್ಟುಹಬ್ಬ ಹಿನ್ನೆಲೆಯಲ್ಲಿ ಮಾಜಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಟಿ.ತಿಪ್ಪೇಸ್ವಾಮಿ ಆಸ್ಪತ್ರೆಯ ರೋಗಿಗಳಿಗೆ ಬ್ರೆಡ್, ಹಾಲು, ಹಣ್ಣು ವಿತರಿಸಿದರು. ಅವರ ಅಭಿಮಾನಿ ಬಳಗದ ವತಿಯಿಂದ ಬೆಂಗಳೂರು ರಸ್ತೆಯ ಬನಶ್ರೀವೃದ್ದಾಶ್ರಮದ ವೃದ್ದರಿಗೆ ಒಂದು ತಿಂಗಳ ಆಹಾರ ಸಾಮಾಗ್ರಿಗಳನ್ನು ವಿತರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಆಡಳಿತಾಧಿಕಾರಿ ಡಾ.ಜೆ.ಡಿ.ವೆಂಕಟೇಶ್, ಡಾ.ಆರ್.ವೆಂಕಟೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಪರಶುರಾಮ ಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಟಿ.ಶಶಿಧರ, ಸಿ.ವೀರಭದ್ರಬಾಬು, ಆರ್.ಪ್ರಸನ್ನ ಕುಮಾರ್, ನಗರಸಭೆ ನಾಮಿನಿ ಸದಸ್ಯರಾದ ಅನ್ವರ್‌ಮಾಸ್ಟರ್, ನೇತಾಜಿ ಪ್ರಸನ್ನ, ನಟರಾಜು, ವೀರಭದ್ರಿ, ಮುಖಂಡರಾದ ಎಂ.ಚೇತನ್‌ಕುಮಾರ್, ಲಕ್ಷ್ಮಿದೇವಿ, ಬಡಗಿಪಾಪಣ್ಣ, ಭಾಗ್ಯಮ್ಮ, ಉಷಾ, ಗೀತಾಬಾಯಿ, ಭಾನುವೀರೇಶ್, ಸ್ವಾಮಿ, ಸೈಪುಲ್ಲಾ, ಭೀಮಣ್ಣ, ಮಂಜುನಾಥಸ್ವಾಮಿ, ಸಿದ್ದಾಪುರಮಂಜಣ್ಣ, ನಗರಂಗೆರೆ ದ್ಯಾಮಣ್ಣ, ರುದ್ರಮುನಿ ಉಪಸ್ಥಿತರಿದ್ದರು.

# ಪೊಲೀಸ್ ದಾಳಿಯಲ್ಲಿ ವಶಪಡಿಸಿಕೊಂಡ ಐದು ಲಕ್ಷ ರೂ. ಮೌಲ್ಯದ ಪಟಾಕಿ ನಾಶ





» **ಚಳ್ಳಕೆರೆ**

ಕಳೆದ 2023ರಲ್ಲಿ ಚಳ್ಳಕೆರೆ ನಗರದ ವಿವಿಧ ಪಟಾಕಿ ಅಂಗಡಿಗಳ ಮೇಲೆ ಪೊಲೀಸ್ ಇಲಾಖೆ ದಾಳಿ ನಡೆಸಿದ ಸಂದರ್ಭದಲ್ಲಿ ಅನುಮತಿ ಇಲ್ಲದೆ ಅಕ್ರಮವಾಗಿ ಮಾರಾಟವಾಗುತ್ತಿದ್ದ ಸುಮಾರು 5 ಲಕ್ಷ ಮೌಲ್ಯದ ವಿವಿಧ ಕಂಪನಿಯ ಪಟಾಕಿಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದು, ಸದರಿ ಪಟಾಕಿಗಳನ್ನು ಸೋಮವಾರ ನಗರದ ಹೊರವಲಯ ಸರ್ಕಾರಿ ಜಮೀನಿನಲ್ಲಿ ನಾಶಪಡಿಸಲಾಯಿತು. .ಪೊಲೀಸ್ ಇಲಾಖೆ ದಾಳಿ ನಡೆಸಿದ ಸಂದರ್ಭದಲ್ಲಿ ಪಟಾಕಿ ಮಾರಾಟಗಾರರ ಬಳಿ ಯಾವುದೇ ಅಧಿಕೃತ ಅನುಮತಿ ಇರಲಿಲ್ಲ. ಕೆಲವೊಂದು ಕಂಪನಿಗಳಿಂದ ಮಾತ್ರ ಅನುಮತಿ ಇದ್ದು ಅವುಗಳನ್ನು ಹೊರತು ಪಡಿಸಿ ಬೇರೆ ಎಲ್ಲಾ ಪಟಾಕಿಗಳನ್ನು ವಶಪಡಿಸಿಕೊಳ್ಳಲಾಗಿತ್ತು. ನಂತರ ಸರ್ಕಾರದ ಸೂಚನೆಯಂತೆ ಬೆಂಗಳೂರಿನ ಬಾಂಬ್ ನಿಗ್ರಹದಳ ಹಾಗೂ ಸ್ಥಳೀಯ ಪೊಲೀಸರ ನೇತೃತ್ವದಲ್ಲಿ ನಾಶಪಡಿಸಲಾಗಿದೆ. ಆಳಾವಾದ ಗುಂಡಿಯನ್ನು ಜೆಸಿಬಿ ಸಹಾಯದಿಂದ ತೋಡಿ ಅದಲ್ಲಿ ಎಲ್ಲಾ ಪಟಾಕಿಗಳನ್ನು ಜೋಡಿಸಿ ಸಿಡಿದರೂ ಯಾವುದೇ ಅಪಾಯವಾಗದಂತೆ ಮುನ್ನೆಚ್ಚರಿಕೆ ವಹಿಸಿ ನಂತರ ಗುಂಡಿಯಲ್ಲಿನ ಪಟಾಕಿಗಳಿಗೆ ಬೆಂಕಿಹಚ್ಚಿ ನಾಶಪಡಿಸಲಾಯಿತು.

ಈ ಸಂದರ್ಭದಲ್ಲಿ ಠಾಣಾ ಇನ್ಸ್‌ಪೆಕ್ಟರ್ ಕೆ.ಕುಮಾರ್ ಗುಪ್ತಚಾರ ದಳದ ಇನ್ಸ್‌ಪೆಕ್ಟರ್ ಯಮುನಪ್ಪ, ಪಿಎಸ್‌ಐಗಳಾದ ಕೆ.ಸತೀಶ್‌ನಾಯ್ಕ, ಧರೆಪ್ಪಬಾಳಪ್ಪದೊಡ್ಡಮನಿ, ಗುಪ್ತಚಾರ ದಳದ ಪಿಎಸ್‌ಐ ತಿಪ್ಪೇಸ್ವಾಮಿ, ಎಎಸ್‌ಐ ಕೃಷ್ಣಪ್ಪ, ಮುಖ್ಯಪೇದೆ ಚಂದ್ರಶೇಖರ್‌ನಾಯ್ಕ, ವಿಶಾಲ್ ಮತ್ತು ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.



ಚಳ್ಳಕೆರೆ ನಗರದ ಶಾಸಕ ಟಿ.ರಘುಮೂರ್ತಿ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಅವರ ಅಭಿಮಾನಿ ಬಳಗದಿಂದ ಬೆಂಗಳೂರು ರಸ್ತೆಯ ಬನಶ್ರೀವೃದ್ದಾಶ್ರಮದ ವೃದ್ದರಿಗೆ ಹಿಸಿ ಊಟದ ಜೊತೆಗೆ ಒಂದು ತಿಂಗಳ ಆಹಾರ ಸಾಮಾಗ್ರಿಗಳನ್ನು ವಿತರಣೆ ಮಾಡಿದರು. ನೇತಾಜಿ ಪ್ರಸನ್ನ, ಆದರ್ಶ, ಆರ್.ಪ್ರಸನ್ನಕುಮಾರ್, ಚೇತನ್‌ಕುಮಾರ್ ಇದ್ದರು.

## ಪರಿಸರ ವ್ಯವಸ್ಥೆ ಸಂರಕ್ಷಿಸಿ, ಮರುಸ್ಥಾಪಿಸುವುದು ನಮ್ಮ ಜವಾಬ್ದಾರಿ



» **ದಾವಣಗೆರೆ**

ವಿಶ್ವ ಪರಿಸರ ದಿನವು ನಮ್ಮ ಪರಿಸರವನ್ನು ರಕ್ಷಿಸಲು, ಸಂರಕ್ಷಿಸಲು ಮೀಸಲಾದ ಸಂದರ್ಭವಾಗಿದ್ದು, ಪರಿಸರದ ವ್ಯವಸ್ಥೆಗಳನ್ನು ಸಂರಕ್ಷಿಸುವ, ರಕ್ಷಿಸುವ ಹಾಗೂ ಮರುಸ್ಥಾಪಿಸುವುದು ನಮ್ಮ ಜವಾಬ್ದಾರಿಯಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ್ ಅಭಿಪ್ರಾಯಪಟ್ಟರು.

ಶ್ರೀಸಿದ್ದಲಿಂಗೇಶ್ವರ ವಿದ್ಯಾಸಂಸ್ಥೆ, ಆವರಗೆರೆ, ಶ್ರೀಸ್ವಾಮಿ ವಿವೇಕಾನಂದ ವಿದ್ಯಾರ್ಥಿ ಹಸಿರು ಪಡೆ, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು, ದಾವಣಗೆರೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ದಾವಣಗೆರೆ, ಜಿಲ್ಲಾ ಭಾಲಭವನ ಸಮಿತಿ, ದಾವಣತೆರೆ ಇವರ ಸಂಯುಕ್ತಾಶ್ರಯದಲ್ಲಿ ಆವರಗೆರೆಯ ಶ್ರೀ ಸಿದ್ದಲಿಂಗೇಶ್ವರ ವಿದ್ಯಾಸಂಸ್ಥೆಯ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪರಿಸರ ಉಳಿಸಲು ನಾವುಗಳು ಜಾಗತಿಕ ಜ್ಞಾಪಕಕ್ಕಾಗಿ ಪ್ರತಿವರ್ಷ ಜೂನ್ 5ರಂದು ವಿಶ್ವ ಪರಿಸರ ದಿನವನ್ನು ಆಚರಿಸುತ್ತೇವೆ. 1972ರಲ್ಲಿ ವಿಶ್ವ ಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು. ಈ ಘೋಷಣೆಯು ನಿರ್ಣಾಯಕ ಪರಿಸರ ಸಮಸ್ಯೆಗಳ ಬಗ್ಗೆ ಜಾಗೃತಿ ಮೂಡಿಸಲು ಉತ್ತಮ ಸಾಧನವಾಗಿದೆ ಎಂದರು.ಹೆಚ್ಚುತ್ತಿರುವ ಪರಿಸರದ ಸವಾಲುಗಳನ್ನು ಎದುರಿಸುವ ದೃಷ್ಟಿಕೋಣದಿಂದ ವಿಶ್ವ ಪರಿಸರ ದಿನ ಆಚರಣೆ ಅತಿ ಮುಖ್ಯವಾಗಿದೆ. ಪರಿಸರ ಸಂತಕ್ಷಣೆ ಜೊತೆಗೆ ಹವಾಮಾನ ಬದಲಾವಣೆ, ಅರಣ್ಯ ನಾಶ, ಜೀವ ವೈವಿಧ್ಯತೆಯ ನಷ್ಟ ಮತ್ತು ಮಾಲಿನ್ಯದಂತಹ ಪ್ರಮುಖ ಸಮಸ್ಯೆಗಳ ಪರಿಹಾರ ಕಂಡು ಕೊಳ್ಳಲು ಸಹಾಯಕವಾಗಲಿದೆ ಎಂದು ಹೇಳಿದರು.ಪರಿಸರ ಸಮಸ್ಯೆಗಳ ಬಗ್ಗೆ ಜಾಗೃತಿ ಮೂಡಿಸುವ ಮೂಲಕ ನಾವುಗಳು ಪರಿಸರವನ್ನು ಉಳಿಸಿದರೆ ನಮ್ಮ ಪರಿಸರ ಪರಂಪರೆಯನ್ನು ಭವಿಷ್ಯದ ಪೀಳಿಗೆಗೆ ನೀಡಲು ಸಾಧ್ಯವಾಗಲಿದೆ. ಇದಕ್ಕಾಗಿ ತಕ್ಕ ಕ್ರಮಗಳನ್ನು ಕೈಗೊಳ್ಳುವ ಜತೆ ಪರಿಸರದ ಅರಿವು ಮೂಡಿಸಬೇಕಾಗಿದೆ. ಆ ಮೂಲಕ ಧನಾತ್ಮಕ ಬದಲಾವಣೆ ತರಬಹುದು ಎಂದು ತಿಳಿಸಿದರು.

ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್. ಅರುಣಕುಮಾರ್ ಮಾತನಾಡಿ, ಮಾನವ ಸೇರಿದಂತೆ ಪ್ರಾಣಿ, ಪಕ್ಷಿಗಳು ಸೇರಿದಂತೆ ಭೂಮಿಯ ಮೇಲಿನ ಜೀವ ಸಂಕಲವು ಆಹಾರ, ಗಾಳಿ, ನೀರು ಇತರೆಗಳಿಗಾಗಿ ಪರಿಸರವನ್ನು ಅವಲಂಬಿಸಿದೆ ಎಂದರೆ ತಪ್ಪಾಗಲಾರದು. ಆದರೆ, ಇತ್ತೀಚಿನ ದಿನಗಳಲ್ಲಿ ಮಾನವ ಅಧುನಿಕ ಬದುಕಿನ ಗೀಳಿಗೆ ಬಿದ್ದು, ಪರಿಸರ ನಾಶ ಮಾಡುತ್ತಿದ್ದಾನೆ. ಮಾನವನ ದುರಾಸೆಯಿಂದ ಗಾಳಿ, ನೀರು, ಮಣ್ಣು ಸೇರಿದಂತೆ ಪರಿಸರದ ಎಲ್ಲಾ ಅಂಶಗಳು ಕಲುಷಿತಗೊಂಡಿವೆ. ಮುನುಷ್ಯ ತನ್ನ ಅಭಿವೃದ್ಧಿಗಾಗಿ ತನಗೆ ಅರಿವಿಲ್ಲದಂತೆ ಪರಿಸರವನ್ನು ಹಾಳು ಮಾಡುತ್ತಿದ್ದಾನೆ.

## ಪ್ರಮುಖ ಸುದ್ದಿ

### ಮೈಲನಹಳ್ಳಿ: ಬಸವಣ್ಣನವರ ನೂತನ ಪ್ರತಿಮೆ ಪ್ರತಿಷ್ಠಾಪನೆ

# ಬಸವೇಶ್ವರರ ವಚನಗಳಿಂದ ಸನ್ಮಾರ್ಗದತ್ತ ಜೀವನ



» **ಚಳ್ಳಕೆರೆ**

ತಾಲ್ಲೂಕಿನ ಮೈಲನಹಳ್ಳಿ ಗ್ರಾಮದ ಗ್ರಾಮ ಪಂಚಾಯಿತಿ ಆವರಣದಲ್ಲಿರುವ ರಾಷ್ಟ್ರೀಯ ಬಸವದಳದ ಮಂಟಪದಲ್ಲಿ 891ನೇ ಬಸವ ಜಯಂತಿ ಹಾಗೂ ಬಸವಣ್ಣನವರ ನೂತನ ಪ್ರತಿಮೆ ಪ್ರತಿಷ್ಠಾಪನಾ ಕಾರ್ಯವನ್ನು ನೆರವೇರಿಸಲಾಯಿತು. ಕಾರ್ಯಕ್ರಮಕ್ಕೂ ಮುನ್ನ ಗ್ರಾಮದ ಎಲ್ಲಾ ಪ್ರಮುಖ ರಸ್ತೆಗಳಲ್ಲಿ ಜಗಜ್ಯೋತಿ ಬಸವೇಶ್ವರರ ಭಾವಚಿತ್ರ ಮೆರವಣಿಗೆ ಅದ್ದೂರಿಯಾಗಿ ನಡೆಯಿತು.

ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಿ ಚಾಲನೆ ನೀಡಿದ ಡಾ.ಗಂಗಾಮಾತಾಜಿ, ಜಗಜ್ಯೋತಿ ಬಸವೇಶ್ವರರು ತಮ್ಮದೇಯಾದ ಸೈದ್ಧಾಂತಿಕ ನಿಲುವು ಹೊಂದಿದ್ದರು. ಎಂದಿಗೂ ಸಹ ಅಧರ್ಮದ ವಿಚಾರಗಳ ಬಗ್ಗೆ ಚಿಂತನೆ ನಡೆಸದೆ ಎಲ್ಲರನ್ನೂ ಧಾರ್ಮಿಕ ವಿಚಾರಧಾರೆಯಿಂದ ಸರಳವಾಗಿ ಬಸವತತ್ವ ಮತ್ತು ಬಸವಣ್ಣನವರ ಮಹಾನ್‌ಕೊಡುಗೆಗಳ ಬಗ್ಗೆ ಜಾಗೃತಿ ಮೂಡಿಸುತ್ತಿದ್ದರು. ಇಂದಿಗೂ ಸಹ ನಾವೆಲ್ಲರೂ ಉತ್ತಮ ಸನ್ಮಾರ್ಗದಲ್ಲಿ ನಡೆಯುತ್ತಿದ್ದರೆ ಅದಕ್ಕೆ ಎಲ್ಲಾ ಪ್ರೇರಣೆ ಶ್ರೀಜಗಜ್ಯೋತಿ ಬಸವೇಶ್ವರರು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಬಸವದಳದ ಮಾಜಿ ರಾಜ್ಯಾಧ್ಯಕ್ಷ ಕೆ.ವೀರೇಶ್, ಇಂದು ಗ್ರಾಮೀಣ ಭಾಗದ ಇಂತಹ ಪರಿಸರದಲ್ಲಿ ಬಸವಣ್ಣನವರ ವಿಚಾರಧಾರೆಯನ್ನು ಎಲ್ಲರಿಗೂ ಮುಟ್ಟುವಂತೆ ಮಾಡಲು ಬಸವದಳ ಯಶಸ್ವಿಯಾಗಿದೆ ಎಂಬುವುದಕ್ಕೆ ಸಾಕ್ಷಿಯಾಗಿದೆ. ಸುತ್ತಮುತ್ತಲ ಹತ್ತಾರು ಹಳ್ಳಿಯ ನೂರಾರು ಭಕ್ತರು ಆಗಮಿಸಿ ಜಗಜ್ಯೋತಿ ಬಸವೇಶ್ವರರ ವಿಚಾರಧಾರೆಗಳನ್ನು ತಮ್ಮ ಜೀವನದಲ್ಲೂ ಅಳವಡಿಸಿಕೊಳ್ಳುವ ನಿಟ್ಟಿನಲ್ಲಿ ದಿಟ್ಟಹೆಜ್ಜೆ ಇಟ್ಟಿದ್ದಾರೆ. ಜಗಜ್ಯೋತಿ ಬಸವೇಶ್ವರ ಪರಿವರ್ತನೆಯ ಹರಿಕಾರ ಎಂದರು. ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಡಾ.ಎಲ್.ಎಸ್.ವೀರೇಶ್, ನಾವೆಲ್ಲರೂ ಸೇರಿ ಇಂದು ಒಂದು ಸತ್ಕಾರ್ಯದಲ್ಲಿ ಭಾಗವಹಿಸಿದ್ದೇವೆ. ಧಾರ್ಮಿಕ ಕಾರ್ಯಕ್ರಮಗಳು ನಮಗೆ ನೆಮ್ಮದಿಯೊಂದಿಗೆ ಪುಣ್ಯವನ್ನು ಸಂಪಾದಿಸಲು ಸಹಕಾರಿಯಾಗಿವೆ. ಜಗಜ್ಯೋತಿ ಬಸವೇಶ್ವರರು ಅಸಾಧಾರಣಾ ಸಾಧನೆಯ ವ್ಯಕ್ತಿಯಾಗಿದ್ದರು ಎಂದರು.

ಕಾರ್ಯಕ್ರಮದಲ್ಲಿ ಅಕ್ಕಮಹಾದೇವಿಪೀಠದ ದಾನೇಶ್ವರಿಮಾತಾಜಿ, ಬಸವರತ್ನಮಾತಾಜಿ, ನಿಬ್ಬಗೂರು ಅವಧೂತ ತಿಪ್ಪೇರುದ್ರಪ್ಪ, ಲೇಖಕಿ ಶಬ್ರೀನಮಹಮ್ಮದ್‌ಆಲಿ ಮುಂತಾದವರು ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮೈಲನಹಳ್ಳಿ ಬಸವದಳದ ಅಧ್ಯಕ್ಷ ಎಂ.ಜಿ.ಬಸವರಾಜಪ್ಪ ವಹಿಸಿದ್ದರು. ಮೈಲನಹಳ್ಳಿದಿನೇಶ್, ಚನ್ನವೀರಪ್ಪ, ಲಿಂಗಾರೆಡ್ಡಿ, ಚಂದ್ರಣ್ಣ, ಪಂಚಾಕ್ಷರಪ್ಪ, ಬೋರಣ್ಣ, ಬಸವರಾಜು, ಶಿವಣ್ಣ, ನಾಗೇಶ್, ಸತೀಶ್, ರಾಜು, ಪ್ರತಿಭಾಬಸವರಾಜು ಮೈಲನಹಳ್ಳಿ, ಘಟಪರ್ತಿ, ಚಿತ್ರನಾಯಕನಹಳ್ಳಿ, ದೊಡ್ಡ ಉಳ್ಳಾರ್ತಿ, ಕಸಿವಿಗೊಂಡನಹಳ್ಳಿ ಗ್ರಾಮದ ಬಸವದಳದ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನ

» **ದಾವಣಗೆರೆ**

ದಾವಣಗೆರೆ ಜಿಲ್ಲೆ ಅಲ್ಪಸಂಖ್ಯಾತರ ಕಲ್ಯಾಣ ವತಿಯಿಂದ 2024-25ನೇ ಸಾಲಿಗೆ ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜುನ್ನು ದಾವಣಗೆರೆ ನಗರದ ಹೊಸಕುಂದುವಾಡದಲ್ಲಿ ಮೊರಾರ್ಜಿ ದೇಸಾಯಿ ಪದವಿಪೂರ್ವ ಕಾಲೇಜು ಪ್ರಾರಂಭಿಸಲಿದ್ದು, ಈ ಕಾಲೇಜಿನಲ್ಲಿ ಉರ್ದು ಮಾಧ್ಯಮ ಭೋದಿಸಲು ಎಂ.ಎ, ಬಿ.ಎಡ್ ವಿದ್ಯಾರ್ಹತೆ ಹೊಂದಿರುವ 1 ಹುದ್ದೆಗೆ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತರು ಜೂನ್ 15 ರೊಳಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಕಚೇರಿ ವೇಳೆಯಲ್ಲಿ ಅರ್ಜಿಗಳನ್ನು ಸಲ್ಲಿಸಬಹುದೆಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಮಲ್ಲಿಕಾರ್ಜುನ್ ಮಠದ್ ತಿಳಿಸಿದ್ದಾರೆ.

### ಬಿ.ಐ.ಇ.ಆರ್.ಟಿ (ಪ್ರಾಥಮಿಕ) ಮತ್ತು ಬಿ.ಐ.ಇ.ಆರ್.ಟಿ(ಪ್ರೌಢ) ಹುದ್ದೆಗಳಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ಶಾಲಾ ಶಿಕ್ಷಣ ಇಲಾಖೆಯ ಸಮಗ್ರ ಶಿಕ್ಷಣ ಕರ್ನಾಟಕ ಕಾರ್ಯಕ್ರಮದಡಿಯಲ್ಲಿ ಸಮನ್ವಯ ಶಿಕ್ಷಣ ಚಟುವಟಿಕೆಯ ದಾವಣಗೆರೆ ಜಿಲ್ಲಾ ವ್ಯಾಪ್ತಿಯ 6 ತಾಲ್ಲೂಕುಗಳಲ್ಲಿ ಖಾಲಿ ಇರುವ ಬಿ.ಐ.ಇ.ಆರ್.ಟಿ(ಪ್ರಾಥಮಿಕ) ಮತ್ತು ಬಿ.ಐ.ಇ.ಆರ್.ಟಿ(ಪ್ರೌಢ) ಹುದ್ದೆಗಳಿಗೆ ಪ್ರಸಕ್ತ ಸಾಲಿಗೆ ತಾತ್ಕಾಲಿಕವಾಗಿ ನೇರಗುತ್ತಿಗೆ ಮೂಲಕ ಅರ್ಹ ಅಭ್ಯರ್ಥಿಗಳನ್ನು ವಿಶೇಷ ಶಿಕ್ಷಣದಲ್ಲಿ ವಿಶೇಷ ಡಿ.ಇಡಿ ಮತ್ತು ಬಿ.ಇಡಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಸ್ವವಿವರವುಳ್ಳ ಮಾಹಿತಿಯನ್ನು ಜೂನ್ 15 ರೊಳಗಾಗಿ ಅಂಚೆ ಅಥವಾ ಮುದ್ದಾಂ ಉಪನಿರ್ದೇಶಕರು ಹಾಗೂ ಪದನಿಮಿತ್ತ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳ ಕಾರ್ಯಾಲಯ, ಸಮಗ್ರ ಶಿಕ್ಷಣ ಕರ್ನಾಟಕ, ಶಾಲಾ ಶಿಕ್ಷಣ ಇಲಾಖೆ, ಅಂಬೇಡ್ಕರ್ ವೃತ್ತ, ದಾವಣಗೆರೆ-577002 ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ :9448999394,08192-296445 ಸಂಪರ್ಕಿಸಿ.

# ಸೇವಾ ಚಟುವಟಿಕೆ ಬಗ್ಗೆ ಆಸಕ್ತಿವಹಿಸಿ: ಪಂಚಾಕ್ಷರಿ

» **ಚಿತ್ರದುರ್ಗ**



ವಿದ್ಯಾರ್ಥಿಗಳಲ್ಲಿ ಪಠ್ಯ ಶಿಕ್ಷಣದ ಜೊತೆ ಸೇವಾ ಚಟುವಟಿಕೆಗಳ ಬಗ್ಗೆಯೂ ಆಸಕ್ತಿ ಮೂಡಿಸುವ ಕೆಲಸ ಹೆಚ್ಚು ಹೆಚ್ಚು ಆಗಬೇಕಿದೆ ಎಂದು ಡಾ.ಎಸ್.ಹೆಚ್. ಪಂಚಾಕ್ಷರಿ ಹೇಳಿದರು.

ನಗರದ ಚಂದ್ರವಳ್ಳಿಯ ಎಸ್.ಜೆ.ಎಂ. ಕಾಲೇಜು ವತಿಯಿಂದ ಇಂಗಳದಾಳು ಗ್ರಾಮದಲ್ಲಿ ಆಯೋಜಿಸಿರುವ ಎನ್.ಎಸ್.ಎಸ್. ಶಿಬಿರದ ಉದ್ಘಾಟನಾ ಸಮಾರಂಭದಲ್ಲಿ ಸಸಿಗೆ ನೀರೆರೆಯುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಹಳ್ಳಿ, ನಗರಗಳ ವ್ಯತ್ಯಾಸ, ಪರಿಸರ ಸಂರಕ್ಷಣೆ, ಸೇವೆಯ ಫಲ ಸೇರಿದಂತೆ ಸಮಾಜದ ವಿವಿಧ ಸ್ವರೂಪಗಳನ್ನು ತಿಳಿಸುವ ಎನ್.ಎಸ್. ಎಸ್ ಕಾರ್ಯಕ್ರಮಗಳು ವಿದ್ಯಾರ್ಥಿಗಳಿಗೆ ಬಹಳಷ್ಟು ಸಹಕಾರಿಯಾಗಿವೆ. ನಮ್ಮ ಕಾಲೇಜು ಆಡಳಿತ ಮಂಡಳಿಯು ಎನ್‌ಎಸ್‌ಎಸ್ ಶಿಬಿರಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಹೇಳಿದರು.

ಮುಖ್ಯಅತಿಥಿ ಐಕ್ಯೂಎಸಿ ಸಂಚಾಲಕ ಡಾ. ಹರ್ಷವರ್ಧನ್ ಮಾತನಾಡಿ, ಹಳ್ಳಿಗಳ ಉದ್ಧಾರವಾದರೆ ದೇಶವು ತನ್ನಿಂದತಾನೇ ಉದ್ಧಾರವಾಗುತ್ತದೆ ಎಂಬುದು ಗಾಂಧೀಜಿಯವರ ಆಶಯವಾಗಿದೆ. ಎನ್.ಎಸ್.ಎಸ್. ಸ್ಥಾಪನೆಯ ಮೂಲಉದ್ದೇಶ ವಿಶ್ವವಿದ್ಯಾನಿಲಯದ ಮಟ್ಟದ ವಿದ್ಯಾರ್ಥಿಗಳನ್ನು ಹಳ್ಳಿಗಳ ಅಧ್ಯಯನದತ್ತ ತೊಡಗಿಸುವುದು. ಗ್ರಾಮಗಳಲ್ಲಿ ಸ್ವಚ್ಛತೆ, ಪರಿಸರ ನೈರ್ಮಲ್ಯ ಬಗ್ಗೆ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳ ಅಭಿವೃದ್ಧಿ, ಆದರ್ಶಮೌಲ್ಯಗಳನ್ನು ಬಿತ್ತುವುದಾಗಿದೆ. ಅದರಂತೆ ಇಂಗಳದಾಳು ಗ್ರಾಮದಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಈ ಶಿಬಿರವನ್ನು ಕಾಲೇಜಿನಿಂದ ಆಯೋಜಿಸಲಾಗಿದೆ. ವಿದ್ಯಾರ್ಥಿಗಳಲ್ಲಿ ಕಲಿಕಾ ಗುಣಮಟ್ಟ ಹೆಚ್ಚಿಸಲು ಇಂಥ ಕಾರ್ಯಕ್ರಮಗಳು ಪೂರಕವಾಗಿವೆ. ಹಾಗಾಗಿ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಇಂಥ ಕಾರ್ಯಕ್ರಮಗಳಲ್ಲಿ ತೊಡಗಿಸಿಕೊಂಡು ಉಪಯೋಗ ಪಡೆದುಕೊಳ್ಳಬೇಕೆಂದರು.

ಇತಿಹಾಸ ಪ್ರಾಧ್ಯಾಪಕ ಪ್ರೊ. ಎಸ್. ಆನಂದ್ ಪ್ರಾಸ್ತಾವಿಕವಾಗಿ ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆಯ ಮಹತ್ವ ಮತ್ತು ಶಿಬಿರಾರ್ಥಿಗಳು ಶಿಬಿರದಲ್ಲಿ ನಿರ್ವಹಿಸಬೇಕಾದ ಶಿಸ್ತಿನ ಬಗ್ಗೆ ತಿಳಿಸಿದರು.ಮಾಜಿ ತಾ। ಪಂ. ಸದಸ್ಯ ಪಿ.ಕೆ. ರಾಮಪ್ಪ, ಗ್ರಾ.ಪ. ಸದಸ್ಯರಾದ ಬೃಂದ ವಸಂತಿಕುಮಾರ್, ಪ್ರಕಾಶ್ ಎಂ., ಪ್ರೊ. ಹೆಚ್.ಎಂ. ಮಂಜುನಾಥಸ್ವಾಮಿ, ಅಧೀಕ್ಷಕ ಶ್ರೀನಿವಾಸಮೂರ್ತಿ, ಉಪನ್ಯಾಸಕ ಲಕ್ಷ್ಮಿಕಾಂತ್, ಗ್ರಾಮದ ಹಿರಿಯ ಮುಖಂಡರು ವೇದಿಕೆಯಲ್ಲಿದ್ದರು.

# ಕನಕ ಭವನಕ್ಕೆ 3 ಕೋಟಿ ರೂ ಅನುದಾನ

» **ಹೊಸದುರ್ಗ**



ಹೊಸದುರ್ಗ ಕನಕ ಭವನ ನಿರ್ಮಾಣಕ್ಕೆ 3 ಕೋಟಿ ರೂ ಅನುದಾನ ನೀಡಿದ್ದೇನೆ. ಹಣ ಶೀಘ್ರದಲ್ಲಿಯೇ ಬಿಡುಗಡೆ ಆಗಲಿದೆ. ಕಳೆದ ಬಾರಿ ಶಾಸಕನ್ನಾಗಿದ್ದಾಗ 2 ಕೋಟಿ ರೂ ಅನುದಾನ ನೀಡಿದ್ದೆ. ಅಧಿಕಾರ ಹೋದ ನಂತರ ಅನುದಾನ ಕೊಡಿಸಲು ಸಾಧ್ಯ ಆಗಿರಲಿಲ್ಲ ಮತ್ತೆ ಈಗ ಒಂದು ಕೋಟಿ ಅನುದಾನ ಹಾಕಲಾಗಿದ್ದು ಒಟ್ಟು 3 ಕೋಟಿ ಅನುದಾನ ನೀಡಿದ್ದೇನೆ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ತಿಳಿಸಿದರು.

ಪಟ್ಟಣದ ಹಳೇ ಕನಕ ಮಠದಲ್ಲಿ ಕನಕ ನೌಕರರ ಸಂಘದಿಂದ ಆಯೋಜಿಲಾಗಿದ್ದ ಕನಕ ನೌಕರರ ನೂತನ ಕಚೇರಿ ಉದ್ಘಾಟನೆ ಹಾಗೂ ನಿವೃತ್ತ ನೌಕರರಿಗೆ ಸನ್ಮಾನ ಕಾರ್ಯಕ್ರಮವನ್ನ ಉದ್ಘಾಟಿಸಿ ಮಾತನಾಡಿದರು. ಎಲ್ಲಾ ಜಾತಿ, ಸಮುದಾಯಗಳ ಬೆಂಬಲ ಪಡೆದು ನಾಲ್ಕು ಬಾರಿ ಶಾಸಕನಾಗಿ ಆಯ್ಕೆಯಾಗಿರುವೆ. ಎಲ್ಲಾ ಸಮುದಾಯಗಳಿಗೂ ನ್ಯಾಯ ಒದಗಿಸುವುದು ನನ್ನ ಜವಾಬ್ದಾರಿ ಮತ್ತು ಕರ್ತವ್ಯ ಆಗಿದೆ. ಈ ನಿಟ್ಟಿನಲ್ಲಿ ತಾಲೂಕಿನ ಎಲ್ಲಾ ಜಾತಿ ಸಮಾಜದ ಬೇಡಿಕೆಗೆಅನುಗುಣವಾಗಿಅನುದಾನನೀಡುವುದು ನನ್ನ ಕರ್ತವ್ಯ. ಎಲ್ಲರನ್ನು ಸಮಾನವಾಗಿ ಕಂಡು ಇವರಿಗೂ ರಾಜಕೀಯ ಮಾಡುತ್ತಾ ಬಂದಿದ್ದೇನೆ. ಇವತ್ತಿನ ದಿನ ರಾಜಕಾರಣ ಮಾಡುವುದು ತುಂಬಾ ಕಷ್ಟ. ಮುಖ್ಯಮಂತ್ರಿಗಳ ಮುಂದೆಯೂ ನೂರಾರು ಬೇಡಿಕೆ ಇದೆ. ಎಲ್ಲವನ್ನು ಈಡೇರಿಸಬೇಕಾಗುತ್ತದೆ ಎಂದರು.ನಿವೃತ್ತಿ ಹೊಂದಿದ ಲೋಕೇಶ್, ರಾಜಪ್ಪ, ಗುರುಸಿದ್ದಪ್ಪ, ಗೋವಿಂದರಾಜು, ಮಂಜುನಾಥ್ ಮತ್ತಿತರರನ್ನ ಸನ್ಮಾನಿಸಿ ಗೌರವಿಸಲಾಯಿತು. ಕನಕ ಸಾಂಸ್ಕೃತಿಕ ನೌಕರರ ಸಂಘ ಅಧ್ಯಕ್ಷ ವಿ. ಮಹಾಂತೇಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ತಾಲೂಕು ಕುರುಬ ಸಂಘದ ಅಧ್ಯಕ್ಷ ಮಂಜುನಾಥ್, ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಕೃಷ್ಣಮೂರ್ತಿ, ಆಗ್ರೋ ಶಿವಣ್ಣ, ಎಂ. ಆರ್. ಸಿ. ಮೂರ್ತಿ,ಅನುಷ್ಠಾನ ಕಮಿಟಿಯ ಸದಸ್ಯ ಖಾದರ್‌ನವಾಜ್ (ಬಾಬಣ್ಣ) ಮಂಜುನಾಥ ಮತ್ತಿತರರು ಉಪಸ್ಥಿತರಿದ್ದರು.

## ಜೂನ್ 21 ರಂದು ಯೋಗ ದಿನ



» **ದಾವಣಗೆರೆ**

10 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಜಿಲ್ಲಾ ಮಟ್ಟದ ಕಾರ್ಯಕ್ರಮವನ್ನು ನಗರದ ಜಿಲ್ಲಾ ಕೇಂದ್ರದಲ್ಲಿ ಆಯೋಜಿಸಲಾಗಿದ್ದು, ಜಿಲ್ಲೆಯ ಎಲ್ಲ ಯೋಗಾಸಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಆಯುಷ್ ಅಧಿಕಾರಿ ಯೋಗೇಂದ್ರಕುಮಾರ್ ತಿಳಿಸಿದರು.

ಸೋಮವಾರ ನಗರದ ಸರ್ಕಾರಿ ಪ್ರಕೃತಿ ಚಿಕಿತ್ಸೆ ಆಸ್ಪತ್ರೆಯಲ್ಲಿ ನಡೆದ 10ನೇ ಅಂತಾರಾಷ್ಟ್ರೀಯ ಯೋಗ ದಿನ ಆಯೋಜನೆಯ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಜಿಲ್ಲಾಡಳಿತ, ಜಿಲ್ಲಾ ಆಯುಷ್ ಇಲಾಖೆ ಹಾಗೂ ವಿವಿಧ ಯೋಗ ಸಂಸ್ಥೆಗಳ ಸಹಯೋಗದಲ್ಲಿ ಜೂನ್ 21 ರಂದು ಅಂತರಾಷ್ಟ್ರೀಯ ಯೋಗದಿನವನ್ನು ಆಯೋಜಿಸಲಾಗುವುದು ಎಂದರು.



ಚಳ್ಳಕೆರೆ ತಾಲ್ಲೂಕಿನ ಕಸ್ತೂರಿತಿಮ್ಮನಹಳ್ಳಿ ಗ್ರಾಮದ ರೈತ ತಾನು ಬೆಳೆದ ಸುಗಂಧರಾಜ್ ಹೂವಿಗೆ ಸೂಕ್ತ ಬೆಲೆ ಸಿಗಲಿಲ್ಲವೆಂದು ನೆಹರೂ ವೃತ್ತದಲ್ಲಿ ರಸ್ತೆಗೆ ಸುರಿದು ಆಕ್ರೋಶ ವ್ಯಕ್ತಪಡಿಸಿದ.

# ಸ್ವಚ್ಛತೆಯಿಂದ ಸಾಂಕ್ರಾಮಿಕ ರೋಗಕ್ಕೆ ತಡೆ



» **ಹೊಸದುರ್ಗ**

ಸ್ವಚ್ಛತೆಯಿಂದ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಬಹುದು ಎಂದು ಶ್ರೀ ಕ್ಷೇತ್ರ ಧರ್ಮಸ್ಥಳದ ಯೋಜನಾಧಿಕಾರಿ ಶಿವಣ್ಣ ಎಸ್ ಸಲಹೆ ನೀಡಿದರು.ತಾಲ್ಲೂಕಿನ ಶ್ರೀರಾಂಪುರ ಹೋಬಳಿಯ ಕಡವಿಗೆರೆ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ವತಿಯಿಂದ ಆಯೋಜಿಸಲಾಗಿದ್ದ ಸ್ವಚ್ಛತೆ ಬಗ್ಗೆ ಅರಿವಿನ ಬೀದಿನಾಟಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.ಪ್ರತಿಯೊಬ್ಬರು ಸ್ವಚ್ಛೆಯಿಂದ ಇದ್ದಾಗ ಸಾಂಕ್ರಾಮಿಕ ರೋಗಗಳಾದ ಡೆಂಗ್ಯೂ, ಚಿಕನ್ ಗುನ್ಯ, ಮಲೇರಿಯಾ, ಇನ್ನಿತರ ರೋಗಗಳನ್ನು ತಡಗಟ್ಟಬಹುದಾಗಿದೆ ಎಂದರು.ಪ್ರಸ್ತುತ ಮಳೆಗಾಲ ಪ್ರಾರಂಭವಾಗಿರುವುದರಿಂದ ಸೊಳ್ಳೆಗಳು ಶುದ್ಧ ನೀರಿನ ಮೇಲೆ ಮೊಟ್ಟೆ ಇಡುವುದರಿಂದ ತಮಗೆ ಅರಿವಿಲ್ಲದೆ ಸಾಂಕ್ರಾಮಿಕ ರೋಗಗಳಿಗೆ ತುತ್ತಾಗುತ್ತಿದ್ದೇವೆ. ಇದನ್ನು ತಡೆಗಟ್ಟಲು ಮನೆಯ ಸುತ್ತಮುತ್ತ ಒಂದು ಚಮಚ ನೀರೂ ನಿಲ್ಲದಂತೆ ಗಾಡಿಯ ಟಯರ್, ತೆಂಗಿನ ಚಿಪ್ಪು, ಎಳೆ ನೀರಿನ ಚಿಪ್ಪು, ಮಕ್ಕಳ ಸಾಮಾಗ್ರಿಗಳ ಮೇಲೆ ಮಳೆ ನೀರು ನಿಂತು ಹೆಚ್ಚು ಸೊಳ್ಳೆಗಳಿಗೆ ಜಗವನ್ನು ಅನುವು ಮಾಡಿಕೊಡದಂತೆ ಇದನ್ನು ಪ್ರತಿಯೊಬ್ಬರು ಪ್ರಜ್ಞೆಯಿಂದ ತಪ್ಪಿಸಬೇಕು ಎಂದು ಕರೆ ನೀಡಿದರು.ಈ, ಸಂಧರ್ಬದಲ್ಲಿ ಜಿಲ್ಲಾ ಜನಜಾಗೃತಿ ವೇದಿಕೆಯ ಸದಸ್ಯ ಬೋರೇಶ್, ಗ್ರಾ.ಪಂ. ಸದಸ್ಯ ರಘು, ಒಕ್ಕೂಟದ ಅಧ್ಯಕ್ಷೆ ಶ್ರೀಮತಿ ಲತಾ, ಕಲಾ ತಂಡದ ಸದಸ್ಯೆ ಶೃತಿ, ಸೇವಾಪ್ರತಿನಿಧಿ ಶ್ರೀಮತಿ ಲಕ್ಷೀದೇವಿ, ಮೇಲ್ವಿಚಾರಕಿ ಶ್ರೀಮತಿ ಶೀಲಾ, ಸಮನ್ವಯಾಧಿಕಾರಿ ಶ್ರೀಮತಿ ಲೀಲಾ ಸೇರಿದಂತೆ ಗ್ರಾಮಸ್ಥರು ಪಾಲ್ಗೊಂಡಿದ್ದರು.






ಅಲಾರಾಂ ಶಬ್ದವೇ ತುಂಬಾ ತುಂಬಾ ನಾದಮಯವಾಗಿತ್ತು. ಹೊರಗಿನ ಹಕ್ಕಿಗಳ ಚಿಲಿಪಿಲಿ ಗಾನ, ಕೋಳಿಯ ಕೂಗು ಸಹ ಚೇತೋಹಾರಿಯಾಗಿತ್ತು. ದೇವಸ್ಥಾನದ ಸುಪ್ರಭಾತ, ಮಸೀದಿಯ ಅಜಾನ್, ಚರ್ಚಿನ ಪ್ರಾರ್ಥನೆ ಇಂದು ವಿಶೇಷ ಭಾವನೆಗಳನ್ನು ಉಕ್ಕಿಸುತ್ತಿತ್ತು. ದೇಹ ಮನಸ್ಸು ಹಗುರಾದಂತೆ ಅನಿಸುತ್ತಿತ್ತು. ಇಷ್ಟು ವರ್ಷಗಳ ಬದುಕಿನಲ್ಲಿ ಇದೇ ಮೊದಲ ಬಾರಿಗೆ ಈ ಅನುಭವ, ಈ ಭಾವ. ಅದಕ್ಕೆ ಕಾರಣವೂ ಇದೆ...

ನನಗೆ ಅಪ್ಪ ಅಮ್ಮ ಎಂದರೆ ಪ್ರತ್ಯಕ್ಷ ದೇವರಿದ್ದಂತೆ. ಅವರ ಮಾತುಗಳನ್ನು ಚಾಚೂ ತಪ್ಪದೆ ಪಾಲಿಸಿಕೊಂಡು ಬಂದಿದ್ದೇನೆ.

ಆದರೆ ಇತ್ತೀಚೆಗೆ ಆ ಒಂದು ದಿನ " ಆ ಹುಡುಗಿ " ಯನ್ನು ನೋಡಿದ ತಕ್ಷಣ ನನಗರಿವಿಲ್ಲದೇ ಏನೋ ವಿಚಿತ್ರ ಅನುಭವವಾಯಿತು. ಅದನ್ನು ವಿವರಿಸಲು ಸಾಧ್ಯವಾಗುತ್ತಿಲ್ಲ. ಇದೊಂದು ಹೊಸ ತಳಮಳ.

ಅಂದಿನಿಂದ ಊಟ ಸರಿಯಾಗಿ ಸೇರುತ್ತಿಲ್ಲ,

ನನ್ನ ಅಚ್ಚುಮೆಚ್ಚಿನ ಹಣ್ಣು ಸಹ ರುಚಿಸುತ್ತಿಲ್ಲ,

ಕಾಫಿ ಟೀ ಮಾತ್ರ ಅತ್ಯಂತ ರುಚಿಕರವಾಗಿದೆ,

ಅಪರೂಪಕ್ಕೆ ಕಾಫಿ ಕುಡಿಯುತ್ತಿದ್ದವನು ಈಗ ದಿನಕ್ಕೆ ಹಲವಾರು ಬಾರಿ ಕುಡಿಯುತ್ತಿದ್ದೇನೆ,

ಕುಂಬ ಕರ್ಣನಂತೆ ನಿದ್ದೆ ಮಾಡುತ್ತಿದ್ದ ನನಗೆ ಈಗ ಕೋಳಿ ನಿದ್ದೆ ಸಾಕಾಗುತ್ತಿದೆ.....

ಕಪಾಟಿನಲ್ಲಿ ಕೈಗೆ ಸಿಕ್ಕಿದ ಬಟ್ಟೆ ತೊಡುತ್ತಿದ್ದ ನಾನು ಈಗ ಮ್ಯಾಚಿಂಗ್ ಡ್ರೆಸ್ ಹುಡುಕುತ್ತಿದ್ದೇನೆ,

ಮುಖಕ್ಕೆ ಸ್ವಲ್ಪ ಕ್ರೀಮ್ – ಪೌಡರ್ ಹಚ್ಚುತ್ತಿದ್ದೇನೆ,

ಹೌದು, ಈಗಷ್ಟೇ ಜಿಮ್ ಗೆ ಸೇರಿದ್ದೇನೆ. ಅಪ್ಪ ಅಮ್ಮ ತಂಗಿಯ ಮೇಲೆ ಸಿಡುಕುತ್ತಿದ್ದ ನಾನು ಈಗ ಸ್ವಲ್ಪ ಮೆತ್ತಗಾಗಿದ್ದೇನೆ,.....


ಆಗಾಗ ಬದುಕು ಬೇಸರವೆನಿಸುತ್ತಿತ್ತು. ಈಗ ಬದುಕು ಎಷ್ಟೊಂದು ಸುಂದರ ಎಂದು ಪ್ರತಿ ಕ್ಷಣ ಅನಿಸುತ್ತಿದೆ.

ಓದುವ ಪ್ರತಿ ಅಕ್ಷರದಲ್ಲೂ ಬೇರೇನೋ ಕಾಣುತ್ತಿದೆ,

ಮೊಬೈಲ್ ನ ಪ್ರತಿ ಒಳ ಬರುವ ಕರೆಗಳು ಏನನ್ನೋ ಕಾತರಿಸುತ್ತದೆ. ಪ್ರತಿ ನಿಮಿಷಕ್ಕೊಮ್ಮೆ ವಾಟ್ಸಾಪ್ ಸಂದೇಶ ನೋಡಬೇಕೆನ್ನುವ ಗೀಳು ಪ್ರಾರಂಭವಾಗಿದೆ,....

ಆಗೆಲ್ಲಾ ಒಂಟಿತನ ಎಂದರೆ ಹಿಂಸೆಯಾಗುತ್ತಿತ್ತು. ಎಲ್ಲಿಗೆ ಹೋದರೂ ಸ್ನೇಹಿತರು ಜೊತೆಯಲ್ಲೆ ಇರಲೇಬೇಕಿತ್ತು.

ಈಗ ಗೆಳೆಯರೆಂದರೆ ಕಿರಿಕಿರಿಯಾಗುತ್ತಿದೆ, ಮನಸ್ಸು ಏಕಾಂತ ಬಯಸುತ್ತದೆ. ಆ ಮೌನದಲ್ಲಿ



ಸಿಹಿಗನಸು ಕಾಣುವ ಆಸೆಯಾಗುತ್ತಿದೆ....

ಇಷ್ಟು ಚಿಕ್ಕ ವಯಸ್ಸಿಗೇ ಏನೋ ದೊಡ್ಡ ಖಾಯಿಲೆ ಬಂದಿರಬೇಕು ಎಂದು ಭಯವಾಗುತ್ತಿದೆ....

ಮೊದಲೆಲ್ಲಾ ಹೀಗಿರಲಿಲ್ಲ,

ಆರಾಮವಾಗಿದ್ದೆ, ಈ ಬದಲಾವಣೆಗೆ ಯಾವ ವೈರಸ್ ಕಾರಣವೋ ತಿಳಿಯುತ್ತಿಲ್ಲ.

ಡಾಕ್ಟರ್ ಬಳಿ ಹೋಗುವಂತ ಯಾವ ತೊಂದರೆಯೂ ಇಲ್ಲ....

ಬಹುಶಃ ಏಳೆಂಟು ತಿಂಗಳ ಹಿಂದೆ ಒಂದು ಸಮಾರಂಭದಲ್ಲಿ ಆಕೆಯನ್ನು ನೋಡಿದ್ದೆ. ನಿಜ ಹೇಳಬೇಕೆಂದರೆ ಆ ಸಮಾರಂಭಕ್ಕೂ ನನಗೂ ಸಂಬಂಧವೇ ಇರಲಿಲ್ಲ. ಗೆಳೆಯರ ಒತ್ತಾಯದ ಮೇರೆಗೆ ಹೋಗಿದ್ದೆ. ಆಗ ಆಕಸ್ಮಿಕವಾಗಿ ಆಕೆಯನ್ನು ನೋಡಿದ್ದೆ. ಮೊದಲ ನೋಟಕ್ಕೆ ಶಾಕ್ ಹೊಡೆದಂತಾಯಿತು. ನೇರ ನನ್ನ ಹೃದಯದೊಳಗೆ ಪ್ರವೇಶಿಸಿದಳು ಅನಿಸುತ್ತದೆ...

ಅವಳ ಸೌಂದರ್ಯವನ್ನು ಬಹಿರಂಗವಾಗಿ ವರ್ಣಿಸಲಾರೆ. ಅದಕ್ಕೆ ಅಕ್ಷರ ರೂಪ ನೀಡಿ ಮಿತಿಗೊಳಿಸಲು ನನಗೆ ಇಷ್ಟವಿಲ್ಲ....

ಅಲ್ಲಿಂದ ಆಕೆಯ ಬಗ್ಗೆ ಮಾಹಿತಿ ಪಡೆದು, ಪರಿಚಯ ಮಾಡಿಕೊಂಡು ಒಂದು ಹಂತಕ್ಕೆ ತರಲು ಸುಮಾರು ತಿಂಗಳುಗಳಾಯಿತು. ಈಗ ಆಕೆ ನನ್ನ ಅಚ್ಚುಮೆಚ್ಚಿನ ಗರ್ಲ್ ಫ್ರೆಂಡ್. ದಿನವೂ ಮೊಬೈಲ್ ಮಾತುಕತೆ ನಡೆಯುತ್ತಲೇ ಇದೆ....

ಫೆಬ್ರವರಿ 14,

ಪ್ರೇಮಿಗಳ ದಿನವಂತೆ.....

ಅಂದು ಆಕೆಯ ಬಳಿ ರೋಸ್ ಕೊಟ್ಟು ಪ್ರೇಮ ನಿವೇದನೆ ಮಾಡಲು ಮನಸ್ಸು ಹಂಬಲಿಸುತ್ತಿದೆ. ಹಾಗೆಯೇ ತುಂಬಾ ಭಯವಾಗುತ್ತಿದೆ. ಆಕೆ ಕೋಪಗೊಂಡರೆ ಅಥವಾ ನಿರಕಾರಿಸಿದರೆ...

ಅಯ್ಯಯ್ಯೋ, ಅದನ್ನು ಊಹಿಸಿಕೊಳ್ಳಲು ಸಾಧ್ಯವಿಲ್ಲ. ಆಕೆ ಇಲ್ಲದ ಬದುಕು ಬೇಡವೇ ಬೇಡ......

ಆಕೆ ನಿರಾಕರಿಸಲಾಗದಂತೆ ಏನಾದರೂ ವಿಶಿಷ್ಠ ರೀತಿಯಲ್ಲಿ ಪ್ರಪೋಸ್ ಮಾಡುವ ಹಂಬಲ.

ಎಷ್ಟೊಂದು ಸಿನಿಮಾ ನೋಡಿದ್ದೇನೆ. ಯಾಕೋ ಈಗ ಯಾವುದೂ ನೆನಪಾಗುತ್ತಿಲ್ಲ. ಪ್ರೀತಿಯ ಹುಚ್ಚು ಇಷ್ಟೊಂದು ಅತಿರೇಕಕ್ಕೆ ಹೋಗುತ್ತದೆ ಎಂದು ಭಾವಿಸಿರಲೇ ಇಲ್ಲ. ಈಗ ಏನು ಮಾಡಲಿ. ನಾಳೆ ಸಿಕ್ಕಿರುವ ಅವಕಾಶ ಕಳೆದು ಕೊಳ್ಳಬಾರದು...

ಮನಸ್ಸು ಚಡಪಡಿಸುತ್ತಿದೆ. ಪ್ರೀತಿ ಎಂದರೆ ಇದೇನಾ !!!!!!!

ಅದರಿಂದಾಗಿಯೇ ಇಂದು ಮನಸ್ಸಿಗೆ ವಿಶೇಷ ಬೆಳಗು. ಆದರೆ ಮರು ಕ್ಷಣವೇ ಅಪ್ಪ – ಅಮ್ಮ ನೆನಪಾಗುತ್ತಿದ್ದಾರೆ. ಇನ್ನೂ ಹಾಸಿಗೆಯಲ್ಲಿ ಇರುವಾಗಲೇ ನನ್ನ ಮೂಡು ಮತ್ತೆ ಬದಲಾಗುತ್ತಿದೆ....

ಏಕೆ ಕಾಡುತ್ತಿರುವೆ ಪ್ರೀತಿ, ಕಳ್ಳಿಯಂತೆ, ಮಳ್ಳಿಯಂತೆ,

ಬಿಟ್ಟು ಬಿಡು ಪ್ರೀತಿ ನನ್ನನ್ನು ಸತಾಯಿಸದೆ,..

ನಾನಿನ್ನೂ ಪದವಿ ಓದುತ್ತಿದ್ದೇನೆ, ಐಎಎಸ್ ಮಾಡುವ ಕನಸಿದೆ,

ಬಡತನದಲ್ಲೇ ನೊಂದು ಬೆಂದ ಅಪ್ಪ ಅಮ್ಮನನ್ನು ಸಲುಹಬೇಕಿದೆ,

ನನ್ನನ್ನೇ ನಂಬಿರುವ ಒಬ್ಬಳೇ ತಂಗಿಯ ಮದುವೆ ಮಾಡಬೇಕಿದೆ,...

ಕಾಡಬೇಡ ಪ್ರೀತಿ ನನ್ನನ್ನು ಮತ್ತೆ ಮತ್ತೆ, ನಿನ್ನ ನೋಟ, ನಿನ್ನ ನಗು, ನಿನ್ನ ನೆನಪು ಕ್ಷಣ ಕ್ಷಣ ಕೊಲ್ಲುತ್ತಿದೆ,...

ಎಲ್ಲರೂ ಹೇಳುತ್ತಾರೆ ಪ್ರೀತಿ ವಿಷವೆಂದು, ಯಾಕೋ ಭಯವಾಗುತ್ತಿದೆ,

ಕಥೆಗಳನ್ನು ಹೇಳುತ್ತಾರೆ ಪ್ರೀತಿಯಿ ಹಿಂದೆ ಹೋದವರ ಪಡಿಪಾಟಲ ಬಾಳು – ಗೋಳು,

ಪ್ರೀತಿ ಮಾಯೆ ಹುಷಾರು ಎನ್ನುತ್ತಾರೆ, ಅದಕ್ಕೆ ಬೇಡ ಪ್ರೀತಿ ಈ ಸೆಳೆತ ಗಿಳಿತ,....

ಆದರೂ ಇರಲಾಗುತ್ತಿಲ್ಲ ನಿನ್ನ ನೆನಯದೇ, ನೀ ಯಾರೋ, ಏನೋ ಒಂದೂ ಗೊತ್ತಿಲ್ಲ ಆದರೆ, ಆಗಲೇ ನನ್ನ ಮನ ನಿನ್ನೊಂದಿಗೆ ಬಾಳು ನಡೆಸುತ್ತಿದೆ, ನಮ್ಮ ಮಕ್ಕಳು ಮರಿಗಳೊಂದಿಗೆ ಸುತ್ತಾಡುತ್ತಿದೆ,....

ನೀನಿಲ್ಲದೆ ನಾನಿಲ್ಲ ಎಂದು ಒದ್ದಾಡುತ್ತಿದೆ, ಅದಕ್ಕೆ ಕೇಳಿಕೊಳ್ಳುತ್ತಿದ್ದೇನೆ ಕಾಡಬೇಡ ಪ್ರೀತಿ ನನ್ನನ್ನು,

ಜವಾಬ್ದಾರಿಯಿದೆ, ಬದುಕಿದೆ, ಭವಿಷ್ಯವಿದೆ, ಕನಸಿದೆ,...

ನೀನು ಅದನ್ನೆಲ್ಲಾ ಕೊಲ್ಲುತ್ತಿರುವೆ, ಅದು ನನಗೂ ಗೊತ್ತು, ಆದರೂ ನಾನೇನು ಮಾಡಲಾಗುತ್ತಿಲ್ಲ, ಮರೆಯಲಾಗುತ್ತಿಲ್ಲ,

ಪ್ರೀತಿ,

ನಿನ್ನ ನೋಟ, ನಿನ್ನ ನಗುವಿಗಾಗಿ ಕಾತರಿಸುತ್ತಿದೆ ಮನ,

ಪ್ರೀತಿ,

ನಿನಗಾಗಿ ನನ್ನೆಲ್ಲಾ ಕನಸುಗಳನ್ನು ತ್ಯಾಗ ಮಾಡಲು ಸಿದ್ಧವಾಗುತ್ತಿದೆ,

ಪ್ರೀತಿ,

ನಿನ್ನ ಕಲ್ಪನೆಯಲ್ಲಿ ನನ್ನ ಜವಾಬ್ದಾರಿಗಳು ಕೊಚ್ಚಿಕೊಂಡು ಹೋಗುತ್ತಿವೆ,...

ಮೋಹದ ವಿರುದ್ಧ ಈಜಾಡು ಎಂದು ಆತ್ಮ ಹೇಳುತ್ತಿದ್ದರೂ,

ಪ್ರೀತಿಯ ಜೊತೆಯೇ ಈಜಾಡು ಎಂದು ಮನಸ್ಸು ಹೇಳುತ್ತಿದೆ,...

ಏನೂ ಮಾಡುವುದೋ ತಿಳಿಯುತ್ತಿಲ್ಲ,

ಮತ್ತೊಮ್ಮೆ ನಿನ್ನನ್ನು ಬೇಡುತ್ತೇನೆ,

ಕಾಡಬೇಡ ಪ್ರೀತಿ, ಮಳ್ಳಿಯಂತೆ, ಕಳ್ಳಿಯಂತೆ ಮತ್ತೆ ಮತ್ತೆ,.....

ಮನಸ್ಸು ಗೊಂದಲದ ಗೂಡು.

ಉತ್ತರ ಸಿಗುತ್ತಿಲ್ಲ. ಏನು ಮಾಡಲಿ ನಾನು......


ಕಾಲದ ನಿರ್ಣಯಕ್ಕೆ ಕಾಯುತ್ತಾ........

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ,

ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

## ಕೋಳಿ ಸಾಕಾಣಿಕೆ ತರಬೇತಿ

ದಾವಣಗೆರೆ : ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿಯನ್ನು ಜೂನ್ 12, 13 ರಂದು ಹಾಗೂ ಕೋಳಿ ಸಾಕಾಣಿಕೆ ತರಬೇತಿಯನ್ನು ಜೂನ್ 14, 15 ರಂದು ಆಯೋಜಿಸಲಾಗಿದೆ. ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192–233787 ಸಂಪರ್ಕಿಸಿ.

## ಸಹಕಾರ ಸಂಘಗಳು ರೈತರಿಗೆ ಪೂರಕವಾಗಿ ಕೆಲಸ ಮಾಡಬೇಕು: ಷಣ್ಮುಖಪ್ಪ

» ದಾವಣಗೆರೆ

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ರೈತರಿಗೆ ಪೂರಕವಾಗಿ ಕೆಲಸ ಮಾಡಿದಾಗ ರೈತರ ಅಭಿವೃದ್ಧಿ ಸಾಧ್ಯ ಎಂದು ಡಿಸಿಸಿ ಬ್ಯಾಂಕ್ ನಿರ್ದೇಶಕ ಡಾ.ಜೆ.ಆರ್.ಷಣ್ಮುಖಪ್ಪ ಹೇಳಿದರು.

ಸೋಮವಾರ ದೇವರಹಳ್ಳಿಯಲ್ಲಿ ಕೃಷಿ ಪತ್ತಿನ ಸಹಕಾರ ಸಂಘ ಮತ್ತು ಅಪೆಕ್ಸ್ ಬ್ಯಾಂಕ್ ಅನುದಾನದಡಿಯಲ್ಲಿ ನಿರ್ಮಾಣ ಮಾಡಿರುವ ಗೋದಾಮು ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು. ಸಹಕಾರ ಸಂಘಗಳು ಕಾಲಮಿತಿಯಲ್ಲಿ



ಬೀಜ, ರಸಗೊಬ್ಬರ, ಇತರೆ ಕೃಷಿ ಪರಿಕರಗಳು ಮತ್ತು ಸಾಲ ಸೌಲಭ್ಯ ನೀಡಿದರೆ ರೈತರಿಗೆ ಅನುಕೂಲವಾಗಲಿದೆ ಎಂದರು.

ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕ ನೀಡುವ ಶೂನ್ಯ ಬಡ್ಡಿ ಮತ್ತು ಮಧ್ಯಮಾವಧಿ, ದೀರ್ಘಾವಧಿಯ ಸಾಲ ಸೌಲಭ್ಯಗಳನ್ನು ರೈತರು ಪಡೆದುಕೊಂಡು ಕೃಷಿಯಲ್ಲಿ ತೊಡಗಿಸಿದರೆ ಹೆಚ್ಚು ಅನುಕೂಲವಾಗಲಿದೆ.ಯಾವ ಉದ್ದೇಶಕ್ಕಾಗಿ ಸಾಲ ಪಡೆಯುತ್ತೇಯೋ ಅದೇ ಉದ್ದೇಶಕ್ಕೆ ಸಾಲವಿನಿಯೋಗವಾಗಬೇಕು.ಇಲ್ಲವಾದಲ್ಲಿ ಮರುಪಾವತಿ ಕಷ್ಟವಾಗಲಿದೆಯಲ್ಲದೇ ಸಹಕಾರ ಸಂಘಗಳು ಕೂಡ ನಷ್ಟ ಅನುಭವಿಸ ಬೇಕಾಗುತ್ತದೆ ಎಂದು ಹೇಳಿದರು.

ದಕ್ಷ ಆಡಳಿತ ಮಂಡಳಿ ಇದ್ದರೆ ಯಾವುದೇ ಸಹಕಾರ ಸಂಘಗಳು ಬೆಳೆಯಲು ಸಾಧ್ಯವಾಗಲಿದೆಯಲ್ಲದೇ ಆ ಭಾಗದ ರೈತರ ಅಭಿವೃದ್ಧಿ ಕೂಡ ಸಾಧ್ಯವಾಗಲಿದೆ. ಜಿಲ್ಲೆಯಲ್ಲಿ 182 ಸಹಕಾರ ಸಂಘಗಳಿದ್ದು, ಈ ಎಲ್ಲ ಸಂಘಗಳು ರೈತರ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆ ನೀಡುತ್ತಿವೆ ಎಂದು ತಿಳಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T